ಸಂಪುಟ : 10 ಸಂಚಿಕೆ: 122 ಪುಟ : 4+2 ಬೆಲೆ: 3.00 ರವಿವಾರ ಜೂನ್ 15 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ


ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 122 Pages : 4+2 Price : 3.00 Sunday June 15 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ. ಪಾಟೀಲ ಅವರು ಜೂನ್ 15 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ವಿವರ ಈ ಕೆಳಗಿನಂತಿದೆ.

ಗದುಗಿನ ಕೆಎಚ್ ಪಿ ಐ ಎಂ ಎಸ್ ನಲ್ಲಿ ಬೆಳಿಗ್ಗೆ 10 ಗಂಟೆಗೆ ಐ ಎಂ ಎ ಮೆಡಿಕೊ ರಾಜ್ಯ ಸಮ್ಮೇಳನ ಸಮಾರಂಭದಲ್ಲಿ ಭಾಗವಹಿಸುವರು.

ಮಧ್ಯಾಹ್ನ 1.15 ಗಂಟೆಗೆ ನರಗುಂದ ತಾಲೂಕಿನ ಬೆಣ್ಣೆಹಳ್ಳ ವೀಕ್ಷಣೆ ಹಾಗೂ ಮಳೆಯಿಂದ ಹಾನಿಗೊಳಗಾದ ಕುರ್ಲಗೇರಿ, ಸುರಕೋಡ, ಹದ್ಲಿ ಹಾಗೂ ಖಾನಾಪೂರ ಗ್ರಾಮಗಳಿಗೆ ಭೇಟಿ ನೀಡುವರು.

ಸಾಯಂಕಾಲ 6 ಗಂಟೆಗೆ ಗದಗ ಸಚಿವರ ಕಾರ್ಯಾಲಯ, ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಸೊರಟೂರ ಹಿರಿಯರೊಂದಿಗೆ ಸಭೆ ನಡೆಸುವರು.

ಸಾಯಂಕಾಲ 7.30 ಗಂಟೆಗೆ ವೀರೇಶ್ವರ ಪುಣ್ಯಾಶ್ರಮದಲ್ಲಿ ಲಿಂ.ಪಂ.ಪಂಚಾಕ್ಷರಿ ಗವಾಯಿಗಳವರ 81ನೇ ಹಾಗೂ ಪದ್ಮಭೂಷಣ ಲಿಂ.ಡಾ॥ಪಂ.ಪುಟ್ಟರಾಜ ಕವಿ ಗವಾಯಿಗಳವರ 15ನೇ ಪುಣ್ಯಸ್ಮರಣೋತ್ಸವ ಮತ್ತು ಉಭಯ ಗುರುಗಳ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಳ್ಳುವರು. ನಂತರ ಗದಗನಲ್ಲಿ ವಾಸ್ತವ್ಯ ಮಾಡುವರು ಎಂದು ಸಚಿವರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

### ಪಂಚ ಗ್ಯಾರಂಟಿ ಯೋಜನೆಗಳ ವಿಶೇಷ ನೋಂದಣಿ ಅಭಿಯಾನ ಯಶಸ್ವಿ । ಅಭಿಯಾನಕ್ಕೆ ಸಚಿವ ಎಚ್.ಕೆ. ಪಾಟೀಲ ಮೆಚ್ಚುಗೆ

# ಶೇ.100ರ ಗುರಿ ಸಾಧನೆಯ ಧ್ಯೇಯ

■ವಿಜಯಸಾಕ್ಷಿ ಸುದ್ದಿ, ಗದಗ

ಪಂಚ ಗ್ಯಾರಂಟಿಗಳಿಂದ ದೂರವಾಗಿರುವ ಅರ್ಹ ಕುಟುಂಬಗಳನ್ನು ಯೋಜನೆಯ ವ್ಯಾಪ್ತಿಗೆ ಸೇರಿಸಲು ರಾಜ್ಯದಲ್ಲೇ ಮೊದಲ ಬಾರಿಗೆ ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ನೇತೃತ್ವದಲ್ಲಿ ಶನಿವಾರ ಹಮ್ಮಿಕೊಂಡಿದ್ದ ವಿಶೇಷ ಅಭಿಯಾನ ಯಶಸ್ವಿಯಾಯಿತು.

ಈ ಅಭಿಯಾನದಲ್ಲಿ ಗೃಹಲಕ್ಷ್ಮೀ ಯೋಜನೆಗೆ 43, ಗೃಹಜ್ಯೋತಿಗೆ 17, ಯುವನಿಧಿಗೆ 7 ಹಾಗೂ ರೇಷನ್ ಕಾರ್ಡ್ ತಿದ್ದುಪಡಿಗೆ 36 ಅರ್ಜಿಗಳು ಸೇರಿ ಒಂದೇ ದಿನದಲ್ಲಿ ಒಟ್ಟು 103 ಅರ್ಜಿಗಳು ಸ್ವೀಕೃತವಾದವು. ರಾಜ್ಯದಲ್ಲೇ ಮೊದಲ ಬಾರಿಗೆ ತಾಲೂಕು ಮಟ್ಟದಲ್ಲಿ ವಿಶೇಷ ಅಭಿಯಾನ ಹಮ್ಮಿಕೊಂಡಿರುವ ಖ್ಯಾತಿಗೆ ಗದಗ ಪಾತ್ರವಾಗಿದೆ.



ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಮಾತನಾಡಿ, ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಪಂಚ ಗ್ಯಾರಂಟಿಗಳ ಅನುಷ್ಠಾನದಿಂದ ಗದಗ ತಾಲೂಕು, ಜಿಲ್ಲೆ ಸೇರಿ ರಾಜ್ಯಾದ್ಯಂತ ಬಡತನ ರೇಖೆಯಲ್ಲಿದ್ದ ಕುಟುಂಬಗಳನ್ನು ಆರ್ಥಿಕವಾಗಿ ಮೇಲೆತ್ತಲು ಸಹಕಾರಿಯಾಗಿದೆ. ಈಗಾಗಲೇ ಗದಗ ತಾಲೂಕಿನಲ್ಲಿ ಶೇ. 98ಕ್ಕೂ ಅಧಿಕ ಕುಟುಂಬಗಳು ಪಂಚ ಗ್ಯಾರಂಟಿ ಯೋಜನೆಗಳ ಸದುಪಯೋಗ ಪಡೆದುಕೊಂಡಿದ್ದಾರೆ. ಉಳಿದ ಅರ್ಹ ಫಲಾನುಭವಿಗಳನ್ನು ಯೋಜನೆಯ ವ್ಯಾಪ್ತಿಗೆ ಸೇರಿಸಲು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರ ಸಲಹೆಯಂತೆ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿತ್ತು ಎಂದರು.

ಅಭಿಯಾನದಲ್ಲಿ ರೇಷನ್ ಕಾರ್ಡ್ ಹೆಸರು ಸೇರ್ಪಡೆ ಹಾಗೂ ತಿದ್ದುಪಡಿ, ಕುಟುಂಬದ ಸದಸ್ಯರ ಫೋಟೊ ಬದಲಾವಣೆ, ಕುಟುಂಬದ ಮುಖ್ಯಸ್ಥರ ಬದಲಾವಣೆ ಸೇರಿ ಗೃಹಲಕ್ಷ್ಮೀ, ಯುವನಿಧಿ, ಗೃಹಜ್ಯೋತಿ ಯೋಜನೆಯಡಿ ಹೊಸದಾಗಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು.

**ಅಭಿಯಾನಕ್ಕೆ ಸಚಿವರ ಮೆಚ್ಚುಗೆ**

ರಾಜ್ಯದಲ್ಲಿ ಮೊಟ್ಟಮೊದಲ ಬಾರಿಗೆ ಗದಗ ತಾಲೂಕಿನಲ್ಲಿ ಈವರೆಗೂ ಪಂಚ ಗ್ಯಾರಂಟಿ ಯೋಜನೆಗಳ ಪ್ರಯೋಜನ ಪಡೆಯದ ಫಲಾನುಭವಿಗಳಿಗೆ ವಿಶೇಷ ನೋಂದಣಿ ಅಭಿಯಾನ ಹಮ್ಮಿಕೊಳ್ಳುವ ಮೂಲಕ ಪಂಚ ಗ್ಯಾರಂಟಿ ಯೋಜನೆಗಳ ವ್ಯಾಪ್ತಿಗೆ ಸೇರದ 103 ಅರ್ಹ ಫಲಾನುಭವಿಗಳನ್ನು ಸೇರ್ಪಡೆಗೊಳಿಸಿರುವುದು ಮಾದರಿಯಾಗಿದ್ದು, ಇದೇ ಮಾದರಿಯಲ್ಲಿ ಗ್ರಾಮ, ಹೋಬಳಿ, ವಾರ್ಡ್ ಮಟ್ಟದಲ್ಲಿ ಅಭಿಯಾನ ಹಮ್ಮಿಕೊಂಡು ರಾಜ್ಯದಲ್ಲಿ ಶೇ.100ರಷ್ಟು ಗುರಿ ಸಾಧಿಸಬಹುದಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ ಅಭಿಯಾನದ ಕುರಿತು ಮೆಚ್ಚುಗೆಯ ಮಾತುಗಳನ್ನಾಡಿದರು.

ಈ ವಿಶೇಷ ಅಭಿಯಾನದಲ್ಲಿ ಪಂಚ ಗ್ಯಾರಂಟಿಗಳ ಯೋಜನೆ ವಂಚಿತ 103 ಅರ್ಹ ಫಲಾನುಭವಿಗಳು ಅರ್ಜಿ ಸಲ್ಲಿಸಿರುವುದು ಹೆಮ್ಮೆಯ ವಿಷಯ. ತಾಲೂಕಿನಲ್ಲಿ ಶೇ. 100ರಷ್ಟು ಅರ್ಹ ಫಲಾನುಭವಿಗಳು ಪಂಚ ಗ್ಯಾರಂಟಿ ಪ್ರಯೋಜನ ಪಡೆಯಬೇಕು ಎಂಬುದು ನಮ್ಮ ಉದ್ದೇಶವಾಗಿದೆ. ಈ ಹಿನ್ನೆಲೆಯಲ್ಲಿ ಮುಂದಿನ ದಿನಗಳಲ್ಲಿ ಮತ್ತೊಮ್ಮೆ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯರಾದ ದೇವರಡ್ಡಿ ತಿರ್ಲಾಪೂರ, ರಮೇಶ ಹೊನ್ನಿನಾಯ್ಕರ, ಸಂಗಮೇಶ ಹಾದಿಮನಿ, ಸಂಗಮೇಶ ಕೆರಕಲಮಟ್ಟಿ, ಸಾವಿತ್ರಿ ಹೂಗಾರ, ಶಂಭು ಕಾಳೆ, ಭ ಾ ಷಾ ಸಾ ಬ ▸▸3ನೇ ಪುಟಕ್ಕೆ


### ಮಳೆ, ಪ್ರವಾಹ ಹಾನಿ ಪ್ರದೇಶಗಳ ಭೇಟಿ, ಪರಿಶೀಲನೆ ನಡೆಸಿದ ಸಚಿವ ಸಂತೋಷ ಲಾಡ್

# ಶಾಶ್ವತ ಪರಿಹಾರಕ್ಕಾಗಿ ಕ್ರಮ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹುಬ್ಬಳ್ಳಿ ಮತ್ತು ನವಲಗುಂದ ಸೇರಿದಂತೆ ತಾಲೂಕಿನ ಕರ್ಲವಾಡ, ಆರೇಕುರಟ್ಟಿ, ಯಮನೂರ ಗ್ರಾಮಗಳ ಹತ್ತಿರ ಬೆಣ್ಣೆಹಳ್ಳದಿಂದ ಅಪಾರ ಪ್ರಮಾಣದ ನೀರು ಬಂದು, ಪ್ರವಾಹ ಪರಿಸ್ಥಿತಿ ನಿರ್ಮಾಣವಾಗಿದ್ದ ಮತ್ತು ಹಾನಿಯಾದ ಪ್ರದೇಶವನ್ನು ಶನಿವಾರ ಬೆಳಿಗ್ಗೆ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಎಸ್.ಲಾಡ್ ಅವರು ಹಾಗೂ ಶಾಸಕ ಎನ್.ಎಚ್. ಕೋನರಡ್ಡಿ ವೀಕ್ಷಣೆ ಮಾಡಿದರು.

ಈ ಸಂದರ್ಭದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಸಚಿವರು, ರೈತರ ಜಮೀನುಗಳಲ್ಲಿನ ಬದುಗಳು ಕೊಚ್ಚಿ ಹೋಗಿ ಹಾನಿಯಾಗಿದೆ. ಕ್ಷೇತ್ರದಲ್ಲಿ ಬೆಳೆ ಹಾನಿ ಬಗ್ಗೆ ಮಾಹಿತಿ ತೆಗೆದುಕೊಳ್ಳಲು ಅಧಿಕಾರಿಗಳಿಗೆ



ಸೂಚಿಸಲಾಗಿದ್ದು, ಮಾಹಿತಿ ಮತ್ತು ವರದಿ ಮೇಲೆ ಸರ್ಕಾರದ ಜೊತೆ ಚರ್ಚಿಸಿ, ಎಸ್.ಡಿ.ಆರ್.ಎಫ್ ನಿಯಮಾವಳಿಗಳನ್ನು ಪರಿಶೀಲಿಸಿ, ಅದಕ್ಕೆ ಅನುಗುಣವಾಗಿ ಪರಿಹಾರ ನೀಡಲಾಗುವುದು ಎಂದು ತಿಳಿಸಿದರು.

ಕೆಲವು ಹೊಲಗಳಿಗೆ ನೀರು ನುಗ್ಗಿ ರೈತರಿಗೆ ತೊಂದರೆ-ಯಾಗಿದೆ. ಅದನ್ನು ಪರಿಗಣಿಸಿ ಮುಂದೆ ಮತ್ತೆ ಬಿತ್ತನೆ ಮಾಡುವ ಅವಕಾಶ ಕಲ್ಪಿಸಿಕೊಡಲಾಗುತ್ತದೆ. ಅದರಂತೆ ಮುಂದೆ ಫಸಲು ಬರದೆ ಹೋದಲ್ಲಿ, ಪರಿಹಾರ ಒದಗಿಸುವ ನಿಟ್ಟಿನಲ್ಲಿ ಸರ್ಕಾರದೊಂದಿಗೆ ಚರ್ಚಿಸಲಾಗುತ್ತದೆ ಎಂದು ಸಚಿವ ಸಂತೋಷ ಲಾಡ್ ತಿಳಿಸಿದರು.


ಶಾಸಕ ಎನ್.ಎಚ್. ಕೋನರಡ್ಡಿ ಮಾತನಾಡಿ, ನವಲಗುಂದ ಕ್ಷೇತ್ರದಲ್ಲಿ 3 ತಾಲೂಕಿನ ಹಳ್ಳಗಳು ಬರುತ್ತವೆ. ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಮಳೆಯಾಗಿದ್ದು, ಬೆಣ್ಣೆಹಳ್ಳ, ತುಪ್ಪರಿಹಳ್ಳಕ್ಕೆ ಇತರ 56 ಹಳ್ಳಗಳ ನೀರು ಸೇರಿ ಪ್ರವಾಹ ಸೃಷ್ಟಿಯಾಗಿದೆ. ರೈತರಿಗಾದ ಹಾನಿ ಸರಿದೂಗಿಸುವ ವಿಚಾರವಾಗಿ ಸೋಮವಾರ ಜಿಲ್ಲಾ ▸▸3ನೇ ಪುಟಕ್ಕೆ

ನವಲಗುಂದ ವಿಧಾನಸಭಾ ಮತಕ್ಷೇತ್ರದಲ್ಲಿ ಅನೇಕ ಹಳ್ಳಿಗಳನ್ನು ಪ್ರವಾಸ ಮಾಡಿದ್ದೇವೆ. ಬಹಳ ವರ್ಷಗಳಿಂದ ನವಲಗುಂದ, ಕುಂದಗೋಳ ಭಾಗಗಳಲ್ಲಿ ಈ ರೀತಿ ಪ್ರವಾಹ ಪರಿಸ್ಥಿತಿಯಿಂದ ತೊಂದರೆ ಆಗುತ್ತಿದೆ. ಇದಕ್ಕೆ ಶಾಶ್ವತ ಪರಿಹಾರ ಕಂಡುಹಿಡಿಯಬೇಕು ಎಂದು ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಬದು ಪುನರ್ ನಿರ್ಮಾಣ ಮಾಡುವ ನಿಟ್ಟಿನಲ್ಲಿ 160 ಕೋಟಿ ರೂ.ಗಳ ಕಾಮಗಾರಿಗೆ ಡಿಪಿಆರ್ ಮಾಡಲಾಗಿದ್ದು, ಅದು ಒಂದು ಹಂತಕ್ಕೆ ಬಂದಿದೆ.

**– ಸಂತೋಷ್ ಲಾಡ್.**
ಸಚಿವರು, ಧಾರವಾಡ

ನವಲಗುಂದ ತಾಲೂಕಿನಲ್ಲಿ ಪ್ರವಾಹ ಪೀಡಿತ ಹಾಗೂ ಮಳೆ ಹಾನಿ ಪ್ರದೇಶ ವೀಕ್ಷಣೆ ಪ್ರವಾಸ ಕೈಗೊಂಡಿದ್ದ ಸಚಿವ ಸಂತೋಷ ಲಾಡ್ ಶಾಸಕ ಎನ್.ಎಚ್. ಕೋನರಡ್ಡಿ ಅವರೊಂದಿಗೆ ಬೈಕ್ ಏರಿ ತಾಲೂಕಿನ ಆರೆಕುರಹಟ್ಟಿ ಗ್ರಾಮದಲ್ಲಿ ಬೆಣ್ಣೆಹಳ್ಳದಿಂದ ಬಾಧಿತವಾಗುವ ಎಸ್.ಸಿ. ಕಾಲೋನಿ, ಲಕ್ಷ್ಮೀನಗರ ಪ್ರದೇಶಗಳನ್ನು ವೀಕ್ಷಣೆ ಮಾಡಿದರು. ಸಚಿವರನ್ನು ಬೈಕ್ ಮೇಲೆ ನೋಡಿದ ಅನೇಕರು ಮನೆ ಬಾಗಿಲ್ಲಿ ನಿಂತು ಕೈ ಮುಗಿದರು. ಕೆಲವರು ವಾಹನ ನಿಲ್ಲಿಸಿ, ತಮ್ಮ ಸಮಸ್ಯೆ ತಿಳಿಸಿದರು. ಸಚಿವರ ಬೈಕ್ ಸಂಚಾರ ಗ್ರಾಮಸ್ಥರಲ್ಲಿ ಆಶ್ಚರ್ಯ ಮತ್ತು ಅಭಿಮಾನ ಮೂಡಿಸಿತು.

## ಉಪನ್ಯಾಸ ಕಾರ್ಯಕ್ರಮ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಜೂನ್ 15ರ ಬೆಳಿಗ್ಗೆ 7.30ಕ್ಕೆ ನಡೆಯಲಿರುವ ಬಸವದಳದ 1650ನೇ ಶರಣ ಸಂಗಮದಲ್ಲಿ ಸಹಜ ಶಿವಯೋಗ, ಪೂಜ್ಯ ಪಂ. ಪಂಚಾಕ್ಷರಿ ಗವಾಯಿಗಳವರ ಮತ್ತು ಪೂಜ್ಯ ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ, ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣತತ್ವ ಚಿಂತಕಿ, ಶರಣೆ ರೇಣುಕಾ ವಿ.ಕರೇಗೌಡ್ರ ಶಿವಯೋಗ ನಡೆಸಿಕೊಡುವರು. ಪಿ.ಪಿ.ಜಿ ಕಲಾ ಮಹಾವಿದ್ಯಾಲಯದ ಪ್ರಾಚಾರ್ಯ, ಶರಣ ಡಾ. ಆರ್. ಎಸ್. ದಾನರಡ್ಡಿ ಉಪನ್ಯಾಸ ಮಾಡುವರು. ಕಾರಣ ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿ ವಿನಂತಿಸಿದ್ದಾರೆ.

## ಅರವಟಗಿಮಠರಿಗೆ 'ಅತ್ಯುತ್ತಮ ಸಾಧಕ' ಪ್ರಶಸ್ತಿ




■ವಿಜಯಸಾಕ್ಷಿ ಸುದ್ದಿ, ಡಂಬಳ

ದೆಹಲಿಯ ಮ್ಯಾಜಿಕ್ ಬುಕ್ ಆಫ್ ರೆಕಾರ್ಡ್ ಮತ್ತು ಕಲಾ ವಿಶ್ವವಿದ್ಯಾಲಯದ ವತಿಯಿಂದ ಅತ್ಯುತ್ತಮ ಸಾಧಕ ಪ್ರಶಸ್ತಿಯನ್ನು ಡಂಬಳ ಗ್ರಾಮದ ರೈತ ಹೋರಾಟಗಾರ ಮಂಜಯ್ಯಸ್ವಾಮಿ ಅರವಟಗಿಮಠ ಅವರಿಗೆ ಡಾ. ಸಿ.ಪಿ.ಯಾದವ ಅಧ್ಯಕ್ಷತೆಯಲ್ಲಿ ಮತ್ತು ಸುಪ್ರೀಂ ಕೋರ್ಟ್‌ನ ನ್ಯಾಯವಾದಿ ಅಂತಾರಾಷ್ಟ್ರೀಯ ಹ್ಯೂಮನ್ ರೈಟ್ಸ್ ಫೌಂಡೇಷನ್‌ನ ಡಾ.ರಾಮ ಅವತಾರ ಶರ್ಮ ಅವರು 'ಅತ್ಯುತ್ತಮ ಸಾಧಕ' ಪ್ರಶಸ್ತಿ ಪ್ರದಾನ ಮಾಡಿದರು. ಈ ಸಂದರ್ಭದಲ್ಲಿ ದೆಹಲಿ ಪೊಲೀಸ್ ಅಧಿಕಾರಿ ಕಿರಣ್ ಸೇಥಿ, ಸ್ವಯಂ ರಕ್ಷಣಾ ತರಬೇತಿಯ ಮುಖ್ಯ ತರಬೇತುದಾರ ಶಿವಕುಮಾರ್ ಕೊಪ್ಲಿ, ಪ್ರಸಿದ್ಧ ನಟ ಮತ್ತು ನಿರ್ದೇಶಕ ಡಾ. ಗಾಣಗಲ್ಲ ವಿಜಯ್ ಕುಮಾರ್, ಡಂಬಳ ಗ್ರಾಮದ ಸನ್ನಿಂಗಪ್ಪ ಗೋವಿನಕೊಪ್ಪ, ಮಲ್ಲಪ್ಪ ಮಠದ, ವರ್ತಮಾನಗೌಡ ಪಾಟೀಲ್, ಸಣ್ಣಯಲ್ಲಪ್ಪ ಉಪ್ಪಾರ ಇದ್ದರು. ಡಂಬಳ ಗ್ರಾಮದ ರೈತರು, ಹಿರಿಯರು ಮಂಜಯ್ಯಸ್ವಾಮಿ ಅರವಟಗಿಮಠರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

## ಕೌನ್ಸಲಿಂಗ್ ಪ್ರಕ್ರಿಯೆಗೆ ಹಾಜರಾಗಿ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಾ.ಕ.ರ.ಸಾ ಸಂಸ್ಥೆಯಲ್ಲಿ ಅಧಿಸೂಚನೆ ಸಂಖ್ಯೆ 1/2019 ದಿನಾಂಕ:10-12-2019ರನ್ವಯ ಚಾಲಕ-ಕಂ-ನಿರ್ವಾಹಕ (ಪಜಾ-ಹಿಂಬಾಕಿ) ಮತ್ತು ಚಾಲಕ ಹುದ್ದೆಗಳಿಗೆ ಸಂಬಂಧಿಸಿದಂತೆ ಅಂತಿಮ ಆಯ್ಕೆ ಪಟ್ಟಿಯ ಪ್ರವರ್ಗವಾರು ಹಾಗೂ ಶೇಕಡಾವಾರು (Cut Off) ವಿವರಗಳನ್ನು ಹಾಗೂ ಕೌನ್ಸಲಿಂಗ್ ನಡೆಯುವ ದಿನಾಂಕಗಳ ವಿವರಗಳನ್ನು ಸಂಸ್ಥೆಯ ವೆಬ್‌ಸೈಟ್ ವಿಳಾಸ "www.nwkrtc.karnataka.gov.in" ನಲ್ಲಿ ಪ್ರಕಟಿಸಲಾಗಿದೆ. ಸಂಬಂಧಪಟ್ಟ ಅಭ್ಯರ್ಥಿಗಳು ಕೌನ್ಸಲಿಂಗ್ ಪ್ರಕ್ರಿಯೆಗೆ ತಪ್ಪದೇ ನಿಗದಿತ ದಿನಾಂಕದಂದು ಹಾಜರಾಗುವಂತೆ ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಅದ್ವೈತ ಪ್ರಸಾರ ಪರಿಷತ್ ವತಿಯಿಂದ 'ಅದ್ವೈತಾನುಭವ'

# ಯೋಗದಿಂದ ಆರೋಗ್ಯಯುತ ಜೀವನ

■ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವದ ತುಂಬೆಲ್ಲಾ ಬಹುತೇಕ ಜನರು ಒಂದಿಲ್ಲೊಂದು ರೋಗಗಳಿಂದ ಬಳಲುತ್ತಿದ್ದಾರೆ. ವಿವಿಧ ಆಹಾರ ಪದ್ಧತಿಗಳಿಂದ ರೋಗ ಮುಕ್ತ ಜೀವನ ಸಾಧ್ಯವೇ ಇಲ್ಲ ಎಂಬ ಈ ದಿನಮಾನಗಳಲ್ಲಿ ಪ್ರತಿಯೊಬ್ಬರೂ ನಿಯಮಿತವಾಗಿ ಯೋಗ ಮಾಡುವುದನ್ನು ರೂಢಿಸಿಕೊಂಡರೆ ಶಾಂತಿಯುತ, ಆರೋಗ್ಯಯುತ ಜೀವನ ನಡೆಸಲು ಸಾಧ್ಯ ಎಂದು ಗದುಗಿನ ಯೋಗ ತರಬೇತುದಾರರು ಹಾಗೂ ನಿಸರ್ಗ ಚಿಕಿತ್ಸಾ ತಜ್ಞರಾದ ಡಾ. ಸತೀಶ ಹೊಂಬಾಳಿ ಹೇಳಿದರು.

ನಗರದ ಸಂಭಾಪುರ ರಸ್ತೆಯಲ್ಲಿರುವ ಶ್ರೀ ಶಂಕರ ಮಠದಲ್ಲಿ ಅದ್ವೈತ ಪ್ರಸಾರ ಪರಿಷತ್ ಏರ್ಪಡಿಸಿದ್ದ 38ನೇ 'ಅದ್ವೈತಾನುಭವ' ಕಾರ್ಯಕ್ರಮದಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕುರಿತು ಅವರು ಮಾತನಾಡಿದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ವೇ.




ನಿವೃತ್ತ ಶಿಕ್ಷಕಿ ರಮಾದೇವಿ ಮ್ಯಾಗೇರಿ ಹಲವಾರು ಯೋಗಾಸನಗಳನ್ನು ಪ್ರಾತ್ಯಕ್ಷಿಕೆಯೊಂದಿಗೆ ವಿವರಿಸಿದರು. ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಶಿಕ್ಷಕ ರಾಮಚಂದ್ರ ಮೋನೆ ಮಾತನಾಡಿ, ಯೋಗ, ಸಂಧ್ಯಾವಂದನೆ ಹಾಗೂ ಬಾಲವಿಕಾಸದಂತಹ ಶಿಬಿರಗಳನ್ನು ಸಮಾಜದ ಒಳಿತಿಗಾಗಿ ಅದ್ವೈತ ಪ್ರಸಾರ ಪರಿಷತ್ ನಡೆಸಿಕೊಂಡು ಬಂದಿದೆ. ಅವುಗಳನ್ನು ಮುಂದಿನ ದಿನಮಾನಗಳಲ್ಲಿಯೂ ನಡಸುತ್ತದೆ ಎಂದರು.

ಮೂ. ರತ್ನಾಕರಭಟ್ಟ ಜೋಷಿ ಆಶೀರ್ವಚನ ನೀಡಿ, ಬ್ರಾಹ್ಮಣರು ನಡೆಸುವ ದಿನಚರಿಯೇ ಒಂದು ಯೋಗ. ನಿತ್ಯ ಕರ್ಮಗಳಾದ ತ್ರಿಕಾಲ ಸಂಧ್ಯಾವಂದನೆ, ಉಪವಾಸ, ಏಕಾದಶಿಯ ಆಚರಣೆ ಹಾಗೂ ಪೂಜೆಯ ಎಲ್ಲ ಕ್ರಿಯೆಗಳೂ ಯೋಗದ ಭಾಗಗಳಾಗಿವೆ. ಆದ್ದ-ರಿಂದ ಎಲ್ಲ ಪಾಲಕರೂ ತಮ್ಮ ಮಕ್ಕಳಿಗೆ ಈ ವಿಷಯವನ್ನು ತಿಳಿಸಿ, ಬ್ರಾಹ್ಮಣರ ಆಚರಣೆಗಳು ವೈಜ್ಞಾನಿಕ ಆಧಾರವಾಗಿವೆ ಎಂಬುದನ್ನು ಮನದಟ್ಟು ಮಾಡಿಸಬೇಕು ಎಂದು ಹೇಳಿದರು.

'ಸನಾತನ ಧರ್ಮದಲ್ಲಿ ವಿಜ್ಞಾನ' ವಿಷಯದ ಕುರಿತು ತನ್ವಿ ಮೋನೆ ಮಾತನಾಡಿದರು. ಗಣಪತಿ ಕೌಜಲಗಿ ಅದ್ವೈತ ಮಂಥನ ಶೀರ್ಷಿಕೆಯಡಿಯಲ್ಲಿ ಮಾತನಾಡಿದರು. ಕಾರ್ಯಕ್ರಮದ ಪ್ರಾರಂಭಕ್ಕೂ ಮುನ್ನ ಅಹಮದಾಬಾದ್‌ನಲ್ಲಿ ನಡೆದ ವಿಮಾನ ದುರಂತದಲ್ಲಿ ಮಡಿದವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಬ್ರಹ್ಮವೃಂದದ ವೇದಘೋಷದೊಂದಿಗೆ ಕಾರ್ಯಕ್ರಮ ಪ್ರಾರಂಭವಾಯಿತು. ಜ್ಯೋತಿ ಇನಾಮದಾರ ಪ್ರಾರ್ಥಿಸಿದರು. ಗುರುಮೂರ್ತಿ ದೇಶಪಾಂಡೆ ಸ್ವಾಗತಿಸಿದರು. ಶಾಂಕರ ಮಾಲಿಕೆಯ ಪಠಣವನ್ನು ಸಮರ್ಥ ಪಂತರ ನಡೆಸಿಕೊಟ್ಟರು. ಹೇಮಂತ ಕುಲಕರ್ಣಿ ಕಾರ್ಯಕ್ರಮ ನಿರೂಪಿಸಿದರೆ, ಗಣೇಶಭಟ್ಟ ಪುರಾಣಿಕ ವಂದಿಸಿದರು. ಕಾರ್ಯಕ್ರಮದ ಪ್ರಾಯೋಜಕತ್ವವನ್ನು ಅನಿಲ ತೆಂಬದಮನಿ ಹಾಗೂ ಹೇಮಂತ ಕುಲಕರ್ಣಿ ವಹಿಸಿಕೊಂಡಿದ್ದರು.

## ಸಂಪಾದಕೀಯ

# ಮೀಸಲಾತಿ ಸವಾಲು ಮತ್ತು ಆಡಳಿತ ಸುಧಾರಣೆ

ರಾಜ್ಯದ ಆಡಳಿತ ಯಂತ್ರವು ಸರಿಸುಮಾರು ಎರಡೂವರೆ ಲಕ್ಷ ಹುದ್ದೆಗಳ ಕೊರತೆಯಿಂದ ಬಳಲುತ್ತಿದೆ. ಇದು ಕೇವಲ ಅಂಕಿ-ಅಂಶದ ಸಮಸ್ಯೆಯಲ್ಲ, ಬದಲಿಗೆ ಜನಸಾಮಾನ್ಯರಿಗೆ ಸಕಾಲದಲ್ಲಿ ಸೇವೆಗಳು ಲಭ್ಯವಾಗದೆ ಆಗುತ್ತಿರುವ ತೊಂದರೆಗಳ ನೇರ ಪ್ರತಿಬಿಂಬವಾಗಿದೆ.

ಸರ್ಕಾರಿ ಕಚೇರಿಗಳಲ್ಲಿ ಸಿಬ್ಬಂದಿಯ ಕೊರತೆಯಿಂದಾಗಿ ಕಡತ ವಿಲೇವಾರಿ ವಿಳಂಬ, ಸಾರ್ವಜನಿಕರ ಅಲೆದಾಟ, ಮತ್ತು ಒಟ್ಟಾರೆ ಆಡಳಿತದ ಗುಣಮಟ್ಟ ಕುಸಿಯುತ್ತಿರುವುದು ನಿತ್ಯದ ವಿದ್ಯಮಾನವಾಗಿದೆ. ಈ ಹಿನ್ನೆಲೆಯಲ್ಲಿ, ಖಾಲಿ ಹುದ್ದೆಗಳ ಭರ್ತಿ ಅತ್ಯಂತ ತುರ್ತು ಮತ್ತು ಅವಶ್ಯಕ ಕ್ರಮವಾಗಿದೆ.

ಆದರೆ, ಈ ಪ್ರಮುಖ ವಿಚಾರದಲ್ಲಿ ಸರ್ಕಾರ ಮೀಸಲಾತಿಯ ನೆಪವೊಡ್ಡಿ ಹುದ್ದೆಗಳ ಭರ್ತಿ ಪ್ರಕ್ರಿಯೆಯನ್ನು ಸ್ಥಗಿತಗೊಳಿಸುತ್ತಿರುವುದು ಅಚ್ಚರಿ ಮತ್ತು ಆತಂಕ ಮೂಡಿಸಿದೆ. ಕರ್ನಾಟಕ ಸರ್ಕಾರವು ಖಾಲಿ ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ ಸಮರ್ಥವಾದ ಮತ್ತು ಪ್ರಗತಿಪರವಾದ ನೀತಿಯನ್ನು ಅನುಸರಿಸಬೇಕಿದೆ. ಮೀಸಲಾತಿಯ ಉದ್ದೇಶ ಸಾಮಾಜಿಕ ನ್ಯಾಯವನ್ನು ಎತ್ತಿಹಿಡಿಯುವುದೇ ಹೊರತು, ಆಡಳಿತದ ಕಾರ್ಯಕ್ಷಮತೆಯನ್ನು ಕುಗ್ಗಿಸುವುದಲ್ಲ.

ಈ ನಿಟ್ಟಿನಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರ ಸಲಹೆ ಸೂಕ್ತವಾಗಿದೆ. ಬ್ಯಾಕಲಾಗ್ ಹುದ್ದೆಗಳನ್ನು ಮೀಸಲಿಟ್ಟು, ಉಳಿದ ಹುದ್ದೆಗಳನ್ನು ಭರ್ತಿ ಮಾಡುವುದರಿಂದ ಮೀಸಲಾತಿಯ ಹಕ್ಕನ್ನು ಗೌರವಿಸಿದಂತಾಗುತ್ತದೆ ಮತ್ತು ಆಡಳಿತಕ್ಕೆ ಅಗತ್ಯವಿರುವ ಮಾನವ ಸಂಪನ್ಮೂಲವನ್ನು ಒದಗಿಸಿದಂತಾಗುತ್ತದೆ.

ಸರ್ಕಾರವು ಜನರ ಕೂಗಿಗೆ ಕಿವಿಗೊಡುವುದಕ್ಕಿಂತ ಹೆಚ್ಚಾಗಿ ಹೈಕಮಾಂಡ್‌ನ ಮಾತಿಗೆ ಹೆಚ್ಚಿನ ಮನ್ನಣೆ ನೀಡುತ್ತಿದೆ ಎಂಬ ಆರೋಪಗಳು ಕೇಳಿಬರುತ್ತಿವೆ. ಇದು ಪ್ರಜಾಪ್ರಭುತ್ವದ ಮೂಲ ಆಶಯಗಳಿಗೆ ವಿರುದ್ಧವಾಗಿದೆ.

ಜನರಿಂದ ಆಯ್ಕೆಯಾದ ಸರ್ಕಾರವು ಜನರ ಅಗತ್ಯತೆಗಳಿಗೆ ಮೊದಲ ಆದ್ಯತೆ ನೀಡಬೇಕು. ರಾಜ್ಯದ ಅಭಿವೃದ್ಧಿ ಮತ್ತು ಆಡಳಿತ ಸುಧಾರಣೆಗಿಂತ ರಾಜಕೀಯ ಲೆಕ್ಕಾಚಾರಗಳಿಗೆ ಹೆಚ್ಚು ಒತ್ತು ನೀಡಿದರೆ, ಅಂತಿಮವಾಗಿ ನಷ್ಟ ಅನುಭವಿಸುವುದು ರಾಜ್ಯದ ಜನತೆ ಎನ್ನುವುದನ್ನು ಅರ್ಥ ಮಾಡಿಕೊಳ್ಳಬೇಕು.

## ಕವನ

### ಅಪ್ಪ ಎಂದರೆ ಅದೇನೋ ಆನಂದ




ಸ್ಲೇಟಿನಲ್ಲಿ 'ಅ' ಎಂದು ಬರೆಯಲು ಕಲಿಸಿ
ಸಾವಿರ ಆನೆಗಳ ಬಲ ತುಂಬಿದ
ಆಕಾಶದಷ್ಟು ವಿಶಾಲ ಹೃದಯದ
ಅಪ್ಪನೆಂದರೆ ಅದೇನೋ ಆನಂದ

ಹಬ್ಬಗಳು ಬಂದರೆ ಸಾಕು
ಪೇಟೆಯಲ್ಲಿನ ಹೂವಿನ ರಾಶಿ ಮನೆಗೆ ತಂದು
ಹೂ ಮಾಲೆ ಕಟ್ಟುವಂತೆ ಹೇಳಿದ
ಅಪ್ಪನೆಂದರೆ ಅದೇನೋ ಆನಂದ

ಕಾರುಗಳು ಅಪರೂಪವಾದ ಆ ದಿನಗಳಲ್ಲಿ
ಸೈಕಲ್‌ನಲ್ಲಿಯೇ ಊರು ತಿರುಗಿಸಿದರೂ
ದಣಿಯದೇ ಮಕ್ಕಳನ್ನು ಸಲುಹಿದ
ಅಪ್ಪನೆಂದರೆ ಅದೇನೋ ಆನಂದ

ಮಗಳಿಗೆ ಬಣ್ಣಬಣ್ಣದ ಬಳೆಗಳು
ಬಿಂದಿಗಳನ್ನು ತಂದುಕೊಟ್ಟು
ಅವಳ ನಗುವ ನೋಡಿ ಸಂಭ್ರಮಿಸುವ
ಅಪ್ಪನೆಂದರೆ ಅದೇನೋ ಆನಂದ

ಪ್ರೀತಿಯಿಂದ ಸಾಕಿ ಸಲುಹಿ
ತೋರು ಬೆರಳು ಹಿಡಿದು ನಡೆಸಿ
ಮುದದಿ ಮಗಳ ಧಾರೆಯೆರೆದು ಕೊಟ್ಟ
ಅಪ್ಪನೆಂದರೆ ಅದೇನೋ ಆನಂದ

ಭಾರತಾಂಬೆಯನ್ನು ನಮಿಸಿ
ದೇಶಭಕ್ತಿಗೀತೆಗಳನು ಪಠಿಸಿ
ಗುರು ಸ್ಥಾನದಿ ನಿಂತು ವಿದ್ಯೆ ಕಲಿಸಿದ
ಅಪ್ಪನೆಂದರೆ ಅದೇನೋ ಆನಂದ

ಒಂದು ಕ್ಷಣ ಸಿಡಿಮಿಡಿಗೊಂಡರೂ
ಮರುಕ್ಷಣ ಶಾಂತನಾಗಿ
ಮಕ್ಕಳಂತೆ ನಗೆಯ ಬೀರುವ
ಅಪ್ಪನೆಂದರೆ ಅದೇನೋ ಆನಂದ

ಯಾರ ಗೊಡವೆಗೆ ಹೋಗದೇ
ಯಾವ ಒಡವೆ ಧರಿಸದೇ
ಶ್ರದ್ಧೆಯಿಂದ ದುಡಿದು ಗಳಿಸಿ
ಬದುಕೇ ಬಂಗಾರವಾಗಿಸಿಕೊಂಡ
ಅಪ್ಪನೆಂದರೆ ಅದೇನೋ ಆನಂದ

ಸಂಸಾರ ಕಡಲಿನಲ್ಲಿ ಮುಳುಗಿ
ಈಜಬೇಕು ಇದ್ದು ಜಯಿಸಬೇಕು
ಎಂದು ದಿಟ್ಟತನವ ಕಲಿಸಿದಂತಹ
ಅಪ್ಪನೆಂದರೆ ಅದೇನೋ ಆನಂದ

**– ಅಂಜನಾ ರಾಘವೇಂದ್ರ ಕುಬೇರ.**
ಗದಗ.

### ಜೂನ್ 15, ತಂದೆಯಂದಿರ ದಿನದ ಕುರಿತು ವಿಶೇಷ ಲೇಖನ

# ಅಪ್ಪನಿಂದಲೇ ಈ ಬದುಕು



ಜೂನ್ 15ರಂದು ವಿಶ್ವ ಅಪ್ಪಂದಿರ ದಿನ. ಈ ದಿನಾಚರಣೆಗೂ ಮುನ್ನ ಈ ದಿನದ ಅರ್ಥ ಮತ್ತು ತಂದೆಯ ಮಹತ್ವವನ್ನು ತಿಳಿದುಕೊಳ್ಳಬೇಕು. ಅಪ್ಪ-ಅಮ್ಮ ದೇವರ ಸಮಾನ. ಅಪ್ಪ ಎಂದರೆ ಬೆಳಕು. ಅಪ್ಪನಿಂದಲೇ ಈ ಬದುಕು. ಅಪ್ಪನ ಸ್ಥಾನವನ್ನು ಯಾರಿಂದಲೂ ತುಂಬಲು ಸಾಧ್ಯವಿಲ್ಲ. ತಂದೆಯ ಸ್ಥಾನ ಮತ್ತು ಅಪ್ಪ-ಅಮ್ಮನ ಪ್ರೀತಿ ಅತ್ಯಮೂಲ್ಯವಾದದ್ದು.

ನಮ್ಮನ್ನು ಕಣ್ಣಲ್ಲಿ ಕಣ್ಣಿಟ್ಟು ಸಾಕುವರು ಅಪ್ಪ. ಅಂತಹ ತಂದೆ-ತಾಯಿಗಳನ್ನು ನಾವು ಯಾವಗಲೂ ಗೌರವದಿಂದ ಕಾಣಬೇಕು. ಅದು ನಮ್ಮ ಕರ್ತವ್ಯ ಕೂಡ. ಅಪ್ಪ ನೀ ದೇವರು. ಈ ಜಗವೆಲ್ಲಾ ನೀನೇ ಅಪ್ಪ. ಅಪ್ಪ ಎಂಬ ಎರಡಕ್ಷರದ ಪದ ಪವಿತ್ರವಾದ ಸಂಕೇತ. ಹೌದು, ಅಪ್ಪ-ಅಮ್ಮ ದೇವರ ಸ್ವರೂಪ. ನಾವು ದೇವರನ್ನು ಎಷ್ಟು ಭಯ-ಭಕ್ತಿಯಿಂದ, ಗೌರವದಿಂದ ಪೂಜಿಸಿ ಆರಾಧಿಸುತ್ತೇವೆಯೋ ಹಾಗೇಯೇ ಅಮ್ಮ-ಅಪ್ಪನನ್ನು ಭಯ ಭಕ್ತಿಯಿಂದ, ಗೌರವದಿಂದ ನೋಡಿಕೊಳ್ಳಬೇಕು.

ಅಪ್ಪ ಇಲ್ಲದ ಪ್ರಪಂಚವಿಲ್ಲ. ಎಲ್ಲಾ ಮಕ್ಕಳಿಗೂ ತಂದೆ-ತಾಯಿಯ ಆಶೀರ್ವಾದ ಬೇಕು. ಅವರಿಂದಲೇ ನಾವು. ತಾಯಿ ಮೊದಲ ಗುರು, ಮನೆಯೇ ಮೊದಲ ಪಾಠಶಾಲೆ. ತನ್ನ ಮಕ್ಕಳಿಗೆ ಮೊದಲನೆಯ ಶಿಕ್ಷಕಿಯೇ ತಾಯಿ. ಮಗು ತನ್ನ ಜೀವನದಲ್ಲಿ ಹೇಳುವ ಮೊದಲ ಪದವೂ ಅಮ್ಮ-ಅಪ್ಪ. ಎಲ್ಲಾ ಮಕ್ಕಳ ಪಾಲಿಗೆ ಅಪ್ಪನೇ ಮೊದಲ ಹೀರೋ. ಅಪ್ಪ ಮಗುವಿನ ತೋರು ಬೆರಳು ಹಿಡಿದು ತನ್ನ ಸುತ್ತ ಮುತ್ತ ಇಡೀ ಜಗತ್ತನೇ ತೋರಿಸುತ್ತಾರೆ.

ಅಪ್ಪ ಅಂದರೆ ಜಗತ್ತು, ಅಪ್ಪ ಅಂದರೆ ದೇವರು, ಅಪ್ಪ ಅಂದರೆ ಶಕ್ತಿ, ಅಪ್ಪ ಅಂದರೆ ಆಕಾಶ, ಅಪ್ಪ ಅಂದರೆ ಸ್ನೇಹಿತ, ಅಪ್ಪ ಅಂದರೆ ಪಪ್ರಂಚ, ಅಪ್ಪ ಅಂದರೆ ಪ್ರೀತಿ, ಅಪ್ಪ ಅಂದರೆ ಬೆಳಕು, ಅಪ್ಪ ಅಂದರೆ ಸಂತೋಷ ಹೀಗೆ ಎಷ್ಟು ಅರ್ಥಗಳಿವೆ... ಅಪ್ಪ ಮಕ್ಕಳನ್ನು ಬೈಯುವುದಕ್ಕೆ ಮುಖ್ಯ ಕಾರಣ ನಾವು ಮಾಡಿರುವ ತಪ್ಪನ್ನು ಮತ್ತೆ ಮಾಡಬಾರದು ಮತ್ತು ನಮಗೆ ಯಾವ ಕೆಡುಕೂ ಆಗಬಾರದು ಎಂದು. ಅವರು ನಮಗೆ ಎಷ್ಟೇ ಬೈದರೂ ಮನಸ್ಸಲಿ ಬೆಟ್ಟದಷ್ಟು ಪ್ರೀತಿ ಇರುತ್ತದೆ. ತನಗೆ ಎಷ್ಟೇ ಕಷ್ಟ, ನೋವು ಬಂದರೂ ತನ್ನ ಮಕ್ಕಳು, ತಮ್ಮ ಕುಟುಂಬ ಖುಷಿಯಾಗಿ, ಸಂತೋಷವಾಗಿ ಇರಬೇಕು ಎಂದು ಬಯಸುವರು ಅಪ್ಪ.

ಮಕ್ಕಳು ಕೇಳಿದ್ದನ್ನೆಲ್ಲಾ ಕೊಡಿಸಲು ಆಗದಿದ್ದರೂ ಕೈಲಾಗಿದ್ದನ್ನ ಕೊಡಿಸುವವರು ಅಪ್ಪ. ಬೇಡಿದಷ್ಟು ಕೊಡದೇ ಹೋದರೂ ಸಲ್ಪವಾದರೂ ಕೊಡಿಸುವರು ಅಪ್ಪ. ತನ್ನಿಂದ ಸಾಧಿಸಲು ಸಾಧ್ಯವಾಗದೇ ಇರುವುದನ್ನು ತನ್ನ ಮಕ್ಕಳಿಂದ ಸಾಕಾರಗೊಳಿಸಲು ಪ್ರಯತ್ನ ಮಾಡುವರು ಅಪ್ಪ. ಎಷ್ಟೇ ಕಷ್ಟಗಳು, ನೋವುಗಳು ಬಂದರೂ ತನ್ನಲ್ಲಿಟ್ಟುಕೊಂಡು ಮಕ್ಕಳನ್ನು ಪ್ರೀತಿ ಮಾಡುವವರು ಅಪ್ಪ. ಅಪ್ಪ ಯಾವಗಲೂ ತನ್ನ ದುಃಖಗಳನ್ನು ಮರೆತು ಮಕ್ಕಳ ಜೀವನ ಸಂತೋಷದ ಬಗ್ಗೆ ಯೋಚಿಸುತ್ತಾರೆ. ಮಕ್ಕಳು ಸಂತೋಷವಾಗಿರುವುದನ್ನು ನೋಡಿ ಅವರು ಸಂತೋಷವಾಗಿರುತ್ತಾರೆ. ತಂದೆ-ತಾಯಿಯ ಋಣವನ್ನು ನಾವು ಎಂದಿಗೂ ತೀರಿಸಲು ಸಾಧ್ಯವಿಲ್ಲ. ಆದ್ದರಿಂದ ನಾವು ನಮ್ಮ ತಂದೆ-ತಾಯಿಗೆ ಸಾಧ್ಯವಾದಷ್ಟು ಸೇವೆ ಸಲ್ಲಿಸಬೇಕು. ನಮ್ಮ ವ್ಯಕ್ತಿತ್ವವನ್ನು ಹೆಚ್ಚಿಸಲು ಅವರು ತಮ್ಮ ಜೀವನವನ್ನೇ ಮುಡಿಪಾಗಿಟ್ಟವರು. ನಮ್ಮ ಜೀವನದ ಪ್ರತಿಯೊಂದು ಸಂತೋಷವನ್ನೂ ನಾವು ತಾಯಿ-ತಂದೆಗೇ ನೀಡಬೇಕು. ಅಪ್ಪ ಐ ಲವ್ ಯೂ...!



**– ವಿ.ಎಂ.ಎಸ್.ಗೋಪಿ.**
ಲೇಖಕರು, ಬೆಂಗಳೂರು.

# ಗಾಜಾ ಸಂಘರ್ಷದಲ್ಲಿ ಭಾರತ ಒಂಟಿಯಾಗಿ ನಿಂತಿದೆ

**■ ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಇಸ್ರೇಲ್ ಆಕ್ರಮಿತ ಪ್ಯಾಲೆಸ್ತೀನ್‌ನ ಗಾಝಾದಲ್ಲಿ ಕದನ ವಿರಾಮಕ್ಕೆ ಕರೆ ನೀಡುವ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ನಿರ್ಣಯದಿಂದ ಭಾರತ ಮತ್ತೆ ತಟಸ್ಥವಾಗಿದೆ. ಕಳೆದ ಮೂರು ವರ್ಷಗಳಲ್ಲಿ ಇದು ನಾಲ್ಕನೇ ಬಾರಿಗೆ ಭಾರತ ಮತದಾನದಿಂದ ತಟಸ್ಥವಾಗಿದೆ. ಮೋದಿ ನೇತೃತ್ವದ ಸರ್ಕಾರದ ಈ ನಿರ್ಧಾರದ ವಿರುದ್ಧ ವಿಪಕ್ಷ ಕಾಂಗ್ರೆಸ್ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ. ಗಾಜಾ ಸಂಘರ್ಷದಲ್ಲಿ

ಈ ಬಗ್ಗೆ ಶನಿವಾರ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಕಾಂಗ್ರೆಸ್‌ನ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, "ನಮ್ಮ ವಿದೇಶಾಂಗ ನೀತಿಯು ಈಗ ಹೆಚ್ಚು ಹೆಚ್ಚು ಶಿಥಿಲಗೊಂಡಿದೆ ಎಂಬುದು ಸ್ಪಷ್ಟವಾಗುತ್ತಿದೆ. ಬಹುಶಃ, ಪ್ರಧಾನಿ ಮೋದಿ ಈಗ ತಮ್ಮ ವಿದೇಶಾಂಗ ಸಚಿವರ ಪುನರಾವರ್ತಿತ ತಪ್ಪುಗಳನ್ನು ಪರಿಗಣಿಸಿ ಕೆಲವು ಹೊಣೆಗಾರಿಕೆಯನ್ನು ಹೊಂದಿಸಬೇಕು." ಎಂದು ಹೇಳಿದ್ದಾರೆ.



"ಗಾಜಾದಲ್ಲಿ ಕದನ ವಿರಾಮಕ್ಕಾಗಿ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ನಿರ್ಣಯಕ್ಕೆ 149 ದೇಶಗಳು ಮತ ಹಾಕಿದವು. ಮತದಾನದಿಂದ ದೂರವಿದ್ದ 19 ದೇಶಗಳಲ್ಲಿ ಭಾರತ ಕೂಡಾ ಒಂದಾಗಿದೆ. ಈ ಹೆಜ್ಜೆಯಿಂದ ನಾವು ವಾಸ್ತವಿಕವಾಗಿ ಒಂಟಿಯಾಗಿ ನಿಂತಿದ್ದೇವೆ." ಎಂದು ಅವರು ಹೇಳಿದ್ದಾರ ಎ. ಅಕ್ಟೋಬರ್ 8, 2023 ರಂದು, ಇಸ್ರೇಲ್ ಜನರ ಮೇಲೆ ಪ್ಯಾಲೆಸ್ತೀನಿ ಹೋರಾಟಗಾರರಾದ ಹಮಾಸ್ ನಡೆಸಿದ ಕ್ರೂರ ದಾಳಿಯನ್ನು ಕಾಂಗ್ರೆಸ್ ಖಂಡಿಸಿತ್ತು ಎಂದು ಹೇಳಿರುವ ಅವರು, "ಗಾಝಾದ ದಿಗ್ಬಂಧನ ಮತ್ತು ಅದರ ಮೇಲಿನ ಬಾಂಬ್ ದಾಳಿಗಳನ್ನು ಒಳಗೊಂಡಂತೆ ವಿವೇಚನಾರಹಿತ ಕೃತ್ಯಗಳನ್ನು ನಾವು ನಿರಂತರವಾಗಿ ಖಂಡಿಸಿದ್ದೇವೆ" ಎಂದು ಹೇಳಿದ್ದಾರೆ.

# ಪೊಲೀಸ್ ದಾಖಲೆಗಳಲ್ಲಿ ಬಳಸುವ ಉರ್ದು, ಪರ್ಶಿಯನ್ ಪದಗಳನ್ನು ತಗೆದು ಹಾಕಿದ ಸರಕಾರ

**■ ವಿಜಯಸಾಕ್ಷಿ ಸುದ್ದಿ, ಛತ್ತೀಸ್‌ಗಢ**

ಛತ್ತೀಸ್‌ಗಢದ ಬಿಜೆಪಿ ಸರ್ಕಾರವು ಪೊಲೀಸ್ ದಾಖಲೆಗಳಲ್ಲಿ ಬಳಸಲಾಗುವ ಉರ್ದು ಮತ್ತು ಪರ್ಷಿಯನ್ ಪದಗಳನ್ನು ಕಿತ್ತು ಹಾಕಿ ಹಿಂದಿ ಪದಗನ್ನು ಪರಿಚಯಿಸಿದೆ ಎಂದು ಶನಿವಾರ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಸಾಮಾನ್ಯ ವ್ಯಕ್ತಿಗೆ ಸುಲಭವಾಗಿ ಅರ್ಥವಾಗುವ ಹಿಂದಿ ಪದಗಳೊಂದಿಗೆ ಇದನ್ನು ಬದಲಾಯಿಸಲಾಗಿದ್ದು, ಇದು ಪೊಲೀಸ್ ಸೇವೆಯನ್ನು ಹೆಚ್ಚು ಸುಲಭವಾಗಿ, ಪಾರದರ್ಶಕ ಮತ್ತು ಸಂವಹನಶೀಲವಾಗಿಸುತ್ತದೆ ಎಂದು ಅಧಿಕಾರಿ ಹೇಳಿದ್ದಾರೆ. ಛತ್ತೀಸ್‌ಗಢ । ಪೊಲೀಸ್ ದಾಖಲೆಗಳಲ್ಲಿ

'ಹಲಾಫ್‌ನಾಮಾ' ಬದಲಿಗೆ 'ಶಪತ್ ಪತ್ರ' (ಅಫಿಡವಿಟ್), 'ದಫಾ' ಬದಲಿಗೆ 'ಧಾರಾ' (ವಿಭಾಗ), 'ಫರಿಯಾದಿ' ಬದಲಿಗೆ 'ಶಿಕಾಯತ್ಕರ್ತಾ' (ದೂರುದಾರ) ಮತ್ತು 'ಚಸ್ಮ್‌ದಿದ್' ಬದಲಿಗೆ 'ಪ್ರತ್ಯಕ್ಷದರ್ಶಿ' ಪದಗಳನ್ನು ಬಳಸಲಾಗಿದೆ. ಗೃಹ ಖಾತೆಯನ್ನೂ ಹೊಂದಿರುವ ಉಪಮುಖ್ಯಮಂತ್ರಿ ವಿಜಯ್ ಶರ್ಮಾ ಅವರ ಸೂಚನೆಯ ಮೇರೆಗೆ, ಪೊಲೀಸ್ ಮಹಾನಿರ್ದೇಶಕರು (ಡಿಜಿಪಿ) ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ (ಎಸ್‌ಪಿ) ಪತ್ರ ಬರೆದಿದ್ದು, ಪೊಲೀಸ್ ಕಾರ್ಯದಲ್ಲಿ ಬಳಸುವ ಕಠಿಣ ಮತ್ತು ಸಾಂಪ್ರದಾಯಿಕ ಪದಗಳನ್ನು ಸರಳ ಮತ್ತು ಸ್ಪಷ್ಟ ಹಿಂದಿ ಪದಗಳೊಂದಿಗೆ ಬದಲಾಯಿಸಬೇಕು ಎಂದು ಹೇಳಿದ್ದಾರೆ ಎಂದು ಅಧಿಕೃತ ಹೇಳಿಕೆ ತಿಳಿಸಿದೆ.

ಹಳೆಯ ಕಠಿಣ ಪದಗಳ ಬದಲಿಗೆ ಹಿಂದಿ ಪರ್ಯಾಯಗಳನ್ನು ಹೊಂದಿರುವ 109 ಪದಗಳ ಪಟ್ಟಿಯನ್ನು ಪತ್ರದೊಂದಿಗೆ ನೀಡಲಾಗಿದೆ ಎಂದು ಅದು ತಿಳಿಸಿದೆ. "ಪೊಲೀಸರ ಉದ್ದೇಶ ನಾಗರಿಕರಿಗೆ ಸಹಾಯ ಮಾಡುವುದು ಮತ್ತು ರಕ್ಷಿಸುವುದಾಗಿದ್ದರೆ,

# ಮಕ್ಕಳಿಗೆ ಅಕ್ಷರಾಭ್ಯಾಸ ಕಾರ್ಯಕ್ರಮ



**■ ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಶ್ರೀ ರಾಮಕರುಣಾನಂದ ಶಿಕ್ಷಣ ಸಂಸ್ಥೆಯ ಶಾಲೆಯಲ್ಲಿ ವಿದ್ಯಾರಂಭ ಕಾರ್ಯಕ್ರಮ ನೆರವೇರಿತು. ಶಾಲೆಗೆ ನೂತನವಾಗಿ ಪ್ರವೇಶ ಪಡೆದ ಐಎಲು ಮಕ್ಕಳಿಗೆ ಅಕ್ಷರಾಭ್ಯಾಸ ಕಾರ್ಯಕ್ರಮ ಜರುಗಿತು.

ಜ್ಞಾನ ದೇವತೆ ಸರಸ್ವತಿಯ ಪೂಜೆಯೊಂದಿಗೆ ಕಾರ್ಯಕ್ರಮ ಆರಂಭವಾಯಿತು. ಸುಮಾರು 14 ಮಕ್ಕಳ ಪೋಷಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಕಾರ್ಯಕ್ರಮಕ್ಕೆ ಸಾಕ್ಷಿಯಾದರು.

ಪುಟಾಣಿಗಳಿಗೆ ಅಕ್ಕಿಯಲ್ಲಿ ಓಂಕಾರ ಬರೆಸಿ ಓಂಕಾರ ಉಚ್ಚಾರಣೆ ಮಾಡಿಸುವುದರ ಮೂಲಕ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿಸಿದರು.

ಪ್ರಾಂಶುಪಾಲರಾದ ರಾಘವೇಂದ್ರ ಕೆ.ಆರ್ ಮಗುವಿನ ಬೆಳವಣಿಗೆಯಲ್ಲಿ ಇಂತಹ ಸಂಸ್ಕಾರ ಕೊಡುವುದರ ಉದ್ದೇಶವನ್ನು ವಿವರಿಸಿದರು. ಶಿಕ್ಷಕಿಯರಾದ ಸಮೀನಾಬಾನು, ವಿಜಯಲಕ್ಷ್ಮೀ, ಪ್ರತಿಭಾ ಕಮ್ಮಾರ್ ಹಾಗೂ ವನಜಾಕ್ಷಿ ನೀರಲಗಿ ಕಾರ್ಯಕ್ರಮವನ್ನು ನಡೆಸಿಕೊಟ್ಟರು. ಶಾಲಾ ಆಡಳಿತ ಮಂಡಳಿಯ ಅಧ್ಯಕ್ಷರಾದ ವಿ.ಡಿ. ರಂಗಪ್ಪನವರ ಉಪಸ್ಥಿತರಿದ್ದರು.

### ಮಂಗಲಾ ಬಚಪನ್ ಶಾಲೆಯಲ್ಲಿ ಮಕ್ಕಳಿಗೆ ಅಕ್ಷರಾಭ್ಯಾಸ

# ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿ

**■ ವಿಜಯಸಾಕ್ಷಿ ಸುದ್ದಿ, ಗದಗ**



ಭಾರತೀಯ ಪರಂಪರೆಯಲ್ಲಿ ಜ್ಞಾನ, ವಿದ್ಯೆಗೆ ಅತ್ಯಂತ ಮಹತ್ವವಿದೆ. ಗುರುವಿನಿಂದ ಮಕ್ಕಳಿಗೆ ಅಕ್ಷರಾಭ್ಯಾಸ ಆರಂಭಿಸುವ ಪರಂಪರೆ ಗುರುಕುಲ ಕಾಲದಿಂದಲೂ ಇದ್ದು, ಮಂಗಲಾ ಬಚಪನ್ ಶಾಲೆಯಲ್ಲಿ ಗುರುವಿನಿಂದ ಮಕ್ಕಳಿಗೆ ಅಕ್ಷರ ಕಲಿಕೆ ಆರಂಭಿಸಿದ್ದು ಉತ್ತಮ ಕಾರ್ಯ ಎಂದು ಗದಗ-ಕಪ್ಪತ್ತಗುಡ್ಡ ನಂದಿವೇರಿ ಮಠದ ಶ್ರೀ ಶಿವಕುಮಾರ ಮಹಾಸ್ವಾಮೀಜಿ ಹೇಳಿದರು.

ಅವರು ವಿದ್ಯಾನಗರದಲ್ಲಿನ ಮಂಗಲಾ ಬಚಪನ್ ಪ್ಲೇ ಸ್ಕೂಲ್‌ನಲ್ಲಿ ಶುಕ್ರವಾರ ಶಾಲಾ ಆರಂಭದಲ್ಲಿ ಮಕ್ಕಳಿಗೆ 'ಅಕ್ಷರ ಅಭ್ಯಾಸ' ಆರಂಭಿಸುವ ಮೂಲಕ ಆಶೀರ್ವದಿಸಿ ಮಾತನಾಡಿದರು.

ನಗರದಲ್ಲಿ ಡಾ. ಅಮರೇಶ ನಾಶಿ ಅವರು ಆರಂಭಿಸಿರುವ ಈ ಚಿಕ್ಕ ಮಕ್ಕಳ ಶಾಲೆ ಅತ್ಯಂತ ಆಧುನಿಕವಾಗಿದೆ. ಆಟದೊಂದಿಗೆ ಪಾಠದ ಎಲ್ಲ ಸೌಲಭ್ಯಗಳನ್ನು ಒದಗಿಸಲಾಗಿದೆ. ಪಾಲಕರೂ ಕೂಡಾ ತಮ್ಮ ಮಕ್ಕಳ ಶಿಕ್ಷಣದ ಸಂಪೂರ್ಣ ಜವಾಬ್ದಾರಿಯನ್ನು ಶಿಕ್ಷಕರ ಮೇಲೆ ಬಿಡದೇ ಮನೆಯಲ್ಲಿ ಉತ್ತಮ ಸಂಸ್ಕಾರ ನೀಡಬೇಕು. ಮಂಗಲಾ ಬಚಪನ್ ಶಾಲೆಯಲ್ಲಿ ಶಿಕ್ಷಣ ಪಡೆದ ಮಕ್ಕಳು ಉನ್ನತೋನ್ನತ ಹುದ್ದೇಗೇರಲಿ ಎಂದು ಬಯಸುತ್ತೇನೆ ಎಂದರು.

ಮಂಗಲಾ ಬಚಪನ್ ಶಾಲೆಯ ಕಾರ್ಯದರ್ಶಿ ಸರ್ವಮಂಗಲಾ ಎ.ನಾಶಿ ಶಾಲೆಯಲ್ಲಿರುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು. ಸಂಸ್ಥೆಯ ಅಧ್ಯಕ್ಷರಾದ ಡಾ. ಅಮರೇಶ ಕೆ.ನಾಶಿ ಸಾಂದರ್ಭಿಕವಾಗಿ ಮಾತನಾಡಿದರು.


ಸಮಾರಂಭದಲ್ಲಿ ಹಿರಿಯರಾದ ರೇವಣಸಿದ್ದಪ್ಪ ಯಳಮಲಿ, ಪತ್ರಕರ್ತ ಹಾಗೂ ಹವ್ಯಾಸಿ ರಂಗಕರ್ಮಿ ಮೌನೇಶ ಚಿ. ಬಡಿಗೇರ(ನರೇಗಲ್ಲ), ಹಿರಿಯರಾದ ವಸಂತ ಸೂಗೂರ, ಸುನೀಲ ದಿವಾಕರ, ಶಾಲಾ ಕೋಆರ್ಡಿನೇಟರ್ ನೇತ್ರಾವತಿ ವಿಣೇಕರ್, ಬೆಲ್ಲದ, ಪಾಲಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಮುಕ್ತಾ ಸೂಗೂರ ಪ್ರಾರ್ಥಿಸಿದರು. ಅಚ್ಚುತಾ ಮುಂಡರಗಿ ಸ್ವಾಗತಿಸಿ, ನಿರೂಪಿಸಿ, ವಂದಿಸಿದರು.

### ಬಸವೇಶ್ವರ ಮಹಾವಿದ್ಯಾಲಯದ ವಾರ್ಷಿಕೋತ್ಸವ ಸಮಾರಂಭದಲ್ಲಿ ಎಸ್.ವಿ. ಸಂಕನೂರ

# ವಿದ್ಯೆಯೊಂದಿಗೆ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿಗಳು ವಿದ್ಯಾರ್ಥಿ ಜೀವನ ಮತ್ತು ವಿದ್ಯೆಯ ಮಹತ್ವ ಅರಿತು ವಿದ್ಯಾರ್ಜನೆ ಮಾಡಬೇಕು. ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಿ ಪ್ರಶಸ್ತಿ ಪಡೆದ ಮೇಲೆ ಅದನ್ನು ಉಳಿಸಿಕೊಂಡು ಅದೇ ಸಾಧನೆಯಲ್ಲಿ ಮುಂದುವರೆಯಬೇಕು. ಸಮಯ ವ್ಯರ್ಥ ಮಾಡದೇ ಸತತ ಪರಿಶ್ರಮದಿಂದ ವಿದ್ಯೆಯೊಂದಿಗೆ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು. ಡಾ. ಎಪಿಜೆ ಅಬ್ದುಲ್ ಕಲಾಂ ಹಾಗೂ ಅಂಬೇಡ್ಕರ ಅವರ ಜೀವನಾದರ್ಶಗಳನ್ನು ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಪಾಲಿಸಿಕೊಂಡು ಅವರಂತೆ ಬೆಳೆಯಬೇಕೆಂದು ವಿ.ಪ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.



ಸ್ಥಳೀಯ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಬಸವೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯದಲ್ಲಿ ಪ್ರಸಕ್ತ 2025ನೇ ಸಾಲಿನ ವಾರ್ಷಿಕೋತ್ಸವ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡ ಕರ್ನಾಟಕ ವಿಶ್ವವಿದ್ಯಾಲಯದ ಮೌಲ್ಯಮಾಪನ ವಿಭಾಗದ ಕುಲಸಚಿವರಾದ ಡಾ. ಎನ್.ವಾಯ್. ಮಟ್ಟಿಹಾಳ ಸನ್ಮಾನ ಸ್ವೀಕರಿಸಿ ಮಾತನಾಡಿ, ವಿದ್ಯಾರ್ಥಿಗಳು ಅಜ್ಞಾನದ ಕತ್ತಲೆಯನ್ನು ಗೋಗಲಾಡಿಸುವ ಜ್ಞಾನದ ಜ್ಯೋತಿಯಾಗಿ ಬೆಳೆಯಬೇಕು. ತೀವ್ರಗತಿಯಲ್ಲಿ ಬದಲಾಗುತ್ತಿರುವ ಇಂದಿನ ಅಧುನಿಕ ಯುಗದಲ್ಲಿ ನಮ್ಮ ಪ್ರತಿಭೆಗೆ ಸಂಸ್ಕಾರದ ಸ್ಪರ್ಶ ಬೇಕಾಗಿದೆ. ಸಾಧನೆಗೆ ಸಿರಿವಂತಿಕೆಯ, ಅಂತಸ್ಥಿನ ಆಯಾಮಗಳು ಕಾರಣವಾಗುವುದಿಲ್ಲ. ಪ್ರತಿಯೊಬ್ಬರೂ ಸಮಸ್ಯೆಗಳನ್ನು ಸವಾಲಾಗಿ ಸ್ವೀಕರಿಸಿ ಕೀಳರಿಮೆ ಬಿಟ್ಟು ನಕಾರಾತ್ಮಕ ವಿಚಾರಗಳಿಂದ ಅಂತರಂಗದ ಜೈಲಿನಲ್ಲಿ ಬಂಧಿಸಿಕೊಳ್ಳದೆ ಬುದ್ಧ, ಬಸವ ಹಾಗೂ ಅಂಬೇಡ್ಕರ ಅವರನ್ನು ಮಾದರಿಯಾಗಿಟ್ಟುಕೊಂಡು ಸತತ ಪರಿಶ್ರಮ ಮತ್ತು ಆತ್ಮಬಲದಿಂದ ದಿಟ್ಟ ಹೆಜ್ಜೆಯನ್ನಿಟ್ಟರೆ ಜೀವನದಲ್ಲಿ ಬಹುದೊಡ್ಡ ಸಾಧನೆ ಮಾಡಲು ಸಾಧ್ಯವೆಂದರು.

ಅಧ್ಯಕ್ಷತೆ ವಹಿಸಿದ್ದ ಜ. ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟಿ ಮಾತನಾಡಿ, ಜಗತ್ತಿನಲ್ಲಿ ವಿದ್ಯೆಗೆ ಸಮಾನವಾದುದು ಯಾವುದೂ ಇಲ್ಲ. ಇಂದು ನಕರಾತ್ಮಕವಾಗಿ ಬೆಳೆಯುತ್ತಿರುವ ಯುವಜನಾಂಗವು ತಮ್ಮ ಪ್ರವೃತ್ತಿಗಳನ್ನು ಬದಲಾಯಿಸಿಕೊಂಡು ವಿಚಾರವಾದಿಗಳ, ಶರಣರ ಮತ್ತು ಜ್ಞಾನಿಗಳ ವಿಚಾರಗಳನ್ನು ಮೈಗೂಡಿಸಿಕೊಂಡು ಜೀವನದಲ್ಲಿ ಉನ್ನತ ಸ್ಥಾನ ಪಡೆಯಬೇಕೆಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಕರ್ನಾಟಕ ವಿಶ್ವವಿದ್ಯಾಲಯದ ಬ್ಲ್ಯೂ ಆಗಿ ಆಯ್ಕೆಯಾದ ಮೇಘರಾಜ ವಾಲ್ಮಿಕಿ ಮತ್ತು ಆದರ್ಶ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು. ಜಿಲ್ಲಾಮಟ್ಟದ ಫೆಸ್ಟ್‌ನಲ್ಲಿ ಪ್ರಶಸ್ತಿ ಪಡೆದ ವಾಣಿಜ್ಯ ವಿಭಾಗದ ವಿದ್ಯಾರ್ಥಿಗಳಿಗೆ ಗಣ್ಯರು ಪ್ರಶಸ್ತಿಪತ್ರ ನೀಡಿದರು.

ವೇದಿಕೆಯ ಮೇಲೆ ಅಮರೇಶ ಅಂಗಡಿ, ಈಶಣ್ಣ ಮುನವಳ್ಳಿ, ಮೋಹನ್ ಅಲ್ಮೇಲಕರ್, ಬಲರಾಮ ಬಸವಾ, ಶೇಖಣ್ಣ ಕಳಸಾಪೂರಶೆಟ್ಟರ, ವಿದ್ಯಾಧರ ದೊಡ್ಡಮನಿ, ಎಸ್.ಎಸ್. ಚಟ್ಟಿ, ಸಿದ್ಧಲಿಂಗಯ್ಯ ಹಿರೇಮಠ, ಲಿಂಗರಾಜ ಪಾಟೀಲ ಉಪಸ್ಥಿತರಿದ್ದರು. ರೂಪಾ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಪ್ರಾ. ಎಂ.ಎಂ. ಬುರಡಿ ಸ್ವಾಗತಿಸಿದರು. ಕೆ.ವ್ಹಿ. ಬಾಗಲಕೋಟಿ ಕಾರ್ಯಕ್ರಮ ನಿರೂಪಿಸಿದರು. ಪೂಜಾ ಭಂಡಾರಿ ವಂದಿಸಿದರು. ಪ್ರೀತಿ ಹಿರೇಮಠ ಹಾಗೂ ಮೇಘರಾಜ ವಾಲ್ಮಿಕಿ ಮನರಂಜನಾ ಕಾರ್ಯಕ್ರಮ ನಿರ್ವಹಿಸಿದರು.

## ಶಾಶ್ವತ ಪರಿಹಾರಕ್ಕಾಗಿ ಕ್ರಮ

▶▶ ಮೊದಲನೇ ಪುಟದಿಂದ



ಸಚಿವರೊಂದಿಗೆ ಸಭೆ ಮಾಡಿ ಪರಿಹಾರಕ್ಕಾಗಿ ಸರ್ಕಾರಕ್ಕೆ ಒತ್ತಾಯ ಮಾಡುತ್ತೇವೆ ಎಂದರು.

ಈಗಾಗಲೇ ಬೆಣ್ಣೆಹಳ್ಳ ಅಗಲೀಕರಣ ಕಾಮಗಾರಿಗೆ ರೂ. 200 ಕೋಟಿ ಅನುದಾನ ಬಿಡುಗಡೆಯಾಗಿದ್ದು, ಟೆಂಡರ್ ಕರೆದು ಕಾಮಗಾರಿ ಪ್ರಾರಂಭಿಸಲು ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ್ ಅವರ ಜೊತೆ ಚರ್ಚಿಸಿ ಶೀಘ್ರವೇ ಯೋಜನೆಯನ್ನು ಅನುಷ್ಠಾನಗೊಳಿಸಲು ಮನವಿ ಮಾಡಲಾಗಿದೆ. ಮಳೆ ಪ್ರಾರಂಭವಾಗಿದ್ದರಿಂದ ಕಾಮಗಾರಿ ಪ್ರಾರಂಭಿಸುವದು ವಿಳಂಬವಾಗಿದೆ. ಮಳೆಗಾಲ ಮುಗಿದ ತಕ್ಷಣ ಕಾಮಗಾರಿಯನ್ನು ಪ್ರಾರಂಭಿಸಲಾಗುವದು ಎಂದರು. ಈ ಸಂದರ್ಭದಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ತಹಸೀಲ್ದಾರ ಸುಧೀರ ಸಾಹುಕಾರ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ, ಉಪನಿರ್ದೇಶಕ ಸಂದೀಪ, ತಾ.ಪಂ ಇಒ ಭಾಗ್ಯಶ್ರೀ ಜಾಗೀದಾರ, ಕ್ಷೇತ್ರ ಶಿಕ್ಷಣಾಧಿಕಾರಿ ಶಿವಾನಂದ ಮಲ್ಲಾಡ, ಹಿರಿಯ ಕಾರ್ಮಿಕ ನಿರೀಕ್ಷಕಿ ಭುವನೇಶ್ವರಿ ಕೋಟಿಮಠ, ಸಿಪಿಐ ಶಿವಾನಂದ ಕಟಗಿ ಸೇರಿದಂತೆ ಪಂಚಾಯತರಾಜ್ ಇಂಜಿನಿಯರಿಂಗ್, ಪಂಚಾಯತರಾಜ್ ಮತ್ತು ಗ್ರಾಮೀಣಾಭಿವೃದ್ಧಿ ಇಲಾಖೆ, ಲೋಕೋಪಯೋಗಿ ಇಲಾಖೆ, ನವಲಗುಂದ ಪುರಸಭೆ, ಹೆಸ್ಕಾಂ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

### ಅತಿವೃಷ್ಟಿಯಿಂದ ಹಾನಿಗೊಳಗಾದ ಕುಂದಗೋಳ ತಾಲೂಕಿನ ಪ್ರದೇಶಗಳಿಗೆ ಸಚಿವ ಸಂತೋಷ ಲಾಡ್ ಭೇಟಿ, ಪರಿಶೀಲನೆ

# ಜಿಲ್ಲಾಡಳಿತದಿಂದ ತ್ವರಿತ ಪರಿಹಾರ ಕಾರ್ಯ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಧಾರವಾಡ ಜಿಲ್ಲೆಯಾದ್ಯಂತ ನಿರಂತರವಾಗಿ ಮಳೆ ಸುರಿಯುತ್ತಿದೆ. ಅಣ್ಣಿಗೇರಿ, ನವಲಗುಂದ ಹಾಗೂ ಕುಂದಗೋಳ ತಾಲೂಕಿನ 130 ಮನೆಗಳಿಗೆ ಭಾಗಶಃ ಹಾನಿಯಾಗಿದೆ. ಹಾನಿಯಾದ ಮನೆಗಳಿಗೆ ಎಸ್.ಡಿ.ಆರ್.ಎಫ್ ನಿಯಮಾವಳಿಗಳ ಅನುಸಾರ ಪರಿಶೀಲಿಸಿ, ಪರಿಹಾರವನ್ನು ನೀಡಲಾಗುತ್ತದೆ. ಜಿಲ್ಲಾಡಳಿತದಿಂದ ಪರಿಹಾರ ಕಾರ್ಯಗಳು ನಡೆಯುತ್ತಿವೆ. ಇನ್ನೂ ಹೆಚ್ಚಾಗಿ ಮಳೆ ಬರುವ ಸಾಧ್ಯತೆಯಿದ್ದು, ಸಾರ್ವಜನಿಕರು ಜಾಗರೂಕರಾಗಬೇಕಿದೆ ಎಂದು ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಎಸ್.ಲಾಡ್ ಹೇಳಿದರು.

ಕುಂದಗೋಳ ತಾಲೂಕಿನ ವಿವಿಧ ಹಳ್ಳಿಗಳಲ್ಲಿ ಮಳೆಯಿಂದ ಹಾನಿಯಾದ ಪ್ರದೇಶಗಳಿಗೆ ಶುಕ್ರವಾರ ಭೇಟಿ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಟ್ಟಿ ಹಳ್ಳ ದಾಟುವಾಗ ಮಳೆ ನೀರಿನ ಪ್ರಮಾಣ ಹೆಚ್ಚಾಗಿದ್ದರಿಂದ ಟ್ರಾಕ್ಟರ್ ಉರುಳಿ ಬಿದ್ದಿದೆ. ಪರಿಣಾಮವಾಗಿ ಶಿವಯ್ಯ ಬಸಯ್ಯ ವಟ್ನಾಳಮಠ ಅವರು ನಿಧನರಾಗಿದ್ದಾರೆ. ಶಾಸಕರು, ಅಧಿಕಾರಿಗಳು ಅವರ ಮನೆಗೆ ಭೇಟಿ ನೀಡಿ ಸಾಂತ್ವನ ಹೇಳಿದ್ದಾರೆ. ಸರ್ಕಾರದ ವತಿಯಿಂದ ಮೃತ ಕುಟುಂಬಸ್ಥರಿಗೆ ರೂ.5 ಲಕ್ಷ ಪರಿಹಾರವನ್ನು ನೀಡಲಾಗುತ್ತದೆ ಎಂದು ತಿಳಿಸಿದರು.



ಬಯಲು ಸೀಮೆ ಪ್ರದೇಶದಲ್ಲಿನ ಹಳ್ಳಗಳಿಗೆ ಮಳೆ ನೀರು ಹೆಚ್ಚಿನ ಪ್ರಮಾಣದಲ್ಲಿ ಹರಿದು ಬರುತ್ತದೆ. ಹಳ್ಳಗಳು, ನಾಲಾಗಳ ಮೇಲೆ ಬಳ್ಳಿಗಳು ಬೆಳೆದು ನೀರು ಸೇತುವೆ ಮೇಲೆ ಹರಿಯುತ್ತದೆ. ಹೀಗಾಗಿ ಬೆಣ್ಣೆಹಳ್ಳ, ತುಪ್ಪರಿ ಹಳ್ಳಗಳು ಸಹ ಹೊಲಗಳಲ್ಲಿ ಹರಿದು ಹೋಗುತ್ತವೆ. ಈ ಭಾಗದ ರೈತರಿಗೆ ಸಾಕಷ್ಟು ಅನಾನುಕೂಲ ಆಗಿದೆ. ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಪರಿಶೀಲನೆ ಮಾಡಲಾಗುತ್ತಿದೆ. ಸರ್ಕಾರದಿಂದ ಪರಿಹಾರ ಕೊಡಲು ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗುವುದು ಎಂದರು.

ಹುಬ್ಬಳ್ಳಿಯ ನೇಕಾರ ನಗರದಲ್ಲಿ ಹುಸೇನಸಾಬ್ ಎಂಬುವವರು ನೀರಿನಲ್ಲಿ ಕೊಚ್ಚಿಹೋಗಿರುವ ಸಾಧ್ಯತೆ ಇದೆ. ಅವರ ಪತ್ತೆಗೆ ಪೊಲೀಸ್, ಅಗ್ನಿಶಾಮಕ, ಎಸ್‌ಡಿಆರ್‌ಎಫ್ ತಂಡದಿಂದ ಶೋಧ ಕಾರ್ಯ ನಡೆಯುತ್ತಿದೆ. ಘಟನಾ ಸ್ಥಳ ಸಮೀಪದ ಸಿಸಿಟಿವಿಯನ್ನು ಪರಿಶೀಲನೆ ಮಾಡಲಾಗಿದ್ದು, ಅವರ ಪತ್ತೆ ಕಾರ್ಯ ಮುಂದುವರಿದಿದೆ ಎಂದು ಮಾಹಿತಿ ನೀಡಿದರು.

ಕುಂದಗೋಳ ತಾಲೂಕು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಕಟ್ಟಿಹಳ್ಳದ ಟ್ರ್ಯಾಕ್ಟರ್ ದುರಂತದಲ್ಲಿ ಸಿಲುಕಿ ಗಾಯಗೊಂಡಿದ್ದ ವಾಸು ಶಿವಪ್ಪ ಹೈಬತಿ ಅವರ ಆರೋಗ್ಯವನ್ನು ಸಚಿವರು ವಿಚಾರಿಸಿದರು. ಗಾಯಾಳುವಿಗೆ ಸ್ವತಃ ರೂ. 20 ಸಾವಿರ ಹಣವನ್ನು ವಿತರಿಸಿದರು. ಅಲ್ಲದೇ ಸೂಕ್ತ ರೀತಿಯಲ್ಲಿ ಚಿಕಿತ್ಸೆ ನೀಡುವಂತೆ ವೈದ್ಯರಿಗೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಶಾಸಕ ಎಂ.ಆರ್. ಪಾಟೀಲ, ಮಾಜಿ ಶಾಸಕರಾದ ಎಂ.ಎಸ್. ಅಕ್ಕಿ, ಕುಸುಮಾವತಿ ಶಿವಳ್ಳಿ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಡಿವೈಎಸ್ಪಿ ವಿನೋದ ಮುಕ್ತೇದಾರ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ, ಕುಂದಗೋಳ ತಹಸೀಲ್ದಾರ ರಾಜು ಮಾವರಕರ, ಡಿಎಚ್‌ಓ ಡಾ. ಹೊನಕೇರಿ, ಹಿರಿಯ ಕಾರ್ಮಿಕ ನಿರೀಕ್ಷಕಿ ರಜನಿ ಹಿರೇಮಠ, ಕುಂದಗೋಳ ತಾಲೂಕು ವೈದ್ಯಾಧಿಕಾರಿ ಡಾ. ಸೋಫಿಯಾ, ಸಿಪಿಐ ನವೀನ ಜಕಲಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

> ಇದೇ ಸಂದರ್ಭದಲ್ಲಿ ಸಚಿವರು ಕುಂದಗೋಳ ತಾಲೂಕು ಆಸ್ಪತ್ರೆ, ಹಂಚಿನಾಳ ಮತ್ತು ದೇವನೂರ ಮಧ್ಯೆ ಬರುವ ಕಟ್ಟಿ ಹಳ್ಳದ ವೀಕ್ಷಣೆ, ದೇವನೂರ ಮತ್ತು ಕಮಡೊಳ್ಳಿ ಮಧ್ಯೆ ಬರುವ ಬೆಣ್ಣೆ ಹಳ್ಳ ಮತ್ತು ಬೆಳೆ ಹಾನಿ ವೀಕ್ಷಣೆ, ಹಿರೇನರ್ತಿ ಗ್ರಾಮದ ರಸ್ತೆ ಹಾಗೂ ಸರಕಾರಿ ಪ್ರೌಢಶಾಲೆ ವೀಕ್ಷಣೆ ಹಾಗೂ ಮುಳ್ಳೊಳ್ಳಿ ಗ್ರಾಮದ ರಸ್ತೆ ಹಾಗೂ ಬೆಳೆ ಹಾನಿ ವೀಕ್ಷಣೆ ಮಾಡಿದರು.

# ಮನೋರಮಾ ಕಾಲೇಜಿಗೆ ಉತ್ತಮ ಫಲಿತಾಂಶ







■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಮನೋರಮಾ ಮಹಾವಿದ್ಯಾಲಯದ ಶೈಕ್ಷಣಿಕ ಸಾಲಿನ ಬಿಕಾಂ ಕೋರ್ಸಿನ 5ನೇ ಸೆಮಿಸ್ಟರ್ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಉತ್ತಮ ಫಲಿತಾಂಶ ಸಾಧಿಸಿದ್ದಾರೆ.

ವಿದ್ಯಾರ್ಥಿಗಳಾದ ತೌಸಿಫ ಮುಲ್ಲಾ ಶೇ. 91.57 ಅಂಕ ಪಡೆದು ಪ್ರಥಮ ಹಾಗೂ ಕಾಸ್ಟ್ ಅಕೌಂಟಿಂಗ್ ವಿಷಯದಲ್ಲಿ 100ಕ್ಕೆ 100 ಅಂಕ ಪಡೆದಿದ್ದಾನೆ. ತೇಜಸ್ವಿನಿ ಮೆಣಸಿನಕಾಯಿ ಶೇ.86.85 ಅಂಕ ಪಡೆದು ದ್ವಿತಿಯ, ಹರಿಹರನ್ ಚಂದ್ರಶೇಖರ್ ಶೇ. 85.28 ಅಂಕ ಪಡೆದು ತೃತಿಯ ಸ್ಥಾನ, ಆಶಾ ಮಣ್ಣನ್ನವರ ಶೇ. 78.42 ಅಂಕ ಪಡೆದು 4ನೇ ಸ್ಥಾನ, ವಿಜಯಲಕ್ಷ್ಮೀ ಕಾಗಿ ಶೇ. 78 ಅಂಕ ಪಡೆದು 5ನೇ ಸ್ಥಾನ ಪಡೆದಿದ್ದಾರೆ.

ಮಹಾವಿದ್ಯಾಲಯಕ್ಕೆ ಕೀರ್ತಿ ತಂದ ವಿದ್ಯಾರ್ಥಿಗಳ ಸಾಧನೆಯನ್ನು ಸಂಸ್ಥೆಯ ಚೇರಮನ್ ಎನ್. ಎಮ್. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ನಿರ್ದೇಶಕರಾದ ಸಂಜಯ ಕುಡತರಕರ, ಚೇತನ ಕುಡತರಕರ, ಬಿಕಾಂ ವಿಭಾಗದ ಸಂಯೋಜಕರಾದ ಪ್ರೊ. ಅಲ್ವಿನಾ ಡಿ ಹಾಗೂ ಸಿಬ್ಬಂದಿ ವರ್ಗದವರು ಶ್ಲಾಘಿಸಿದ್ದಾರೆ.

# ಮೌಲ್ಯಯುತ ಜೀವನ ಆದರ್ಶಮಯ



■ ವಿಜಯಸಾಕ್ಷಿ ಸುದ್ದಿ, ಗದಗ

ಮೌಲ್ಯಗಳು ವಿದ್ಯಾರ್ಥಿ ಜೀವನಕ್ಕೆ ಸನ್ಮಾರ್ಗ ತೋರುತ್ತವೆ. ಮೌಲ್ಯಯುತ ಜೀವನವು ಯಾವಾಗಲೂ ಆದರ್ಶಮಯ. ಉತ್ತಮ ನಡತೆ, ಸಚ್ಚಾರಿತ್ರ್ಯದೊಂದಿಗೆ ಮಾನವೀಯ ಮೌಲ್ಯಗಳನ್ನು ಮಕ್ಕಳು ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಚಿಂತಕಿ ಸುಶೀಲಾ ಗಂಗಣ್ಣ ಕೋಟಿ ಹೇಳಿದರು.

ಅವರು ಶನಿವಾರ ಗದಗ ಮಂಜುನಾಥ ನಗರದ ಸರಕಾರಿ ಕಿರಿಯ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆ ನಂ. 4ರಲ್ಲಿ ಮಕ್ಕಳಿಗೆ ಟೈ-ಬೆಲ್ಟ್ ವಿತರಿಸಿ ಮಾತನಾಡಿದರು.

ಶಿಸ್ತು ಬದುಕಿನ ನಿರ್ಧಾರವನ್ನು ಗುರುತಿಸುತ್ತದೆ. ಹೀಗಾಗಿ ಮಕ್ಕಳು ಶಿಸ್ತು-ಪ್ರಾಮಾಣಿಕತೆಯೊಂದಿಗೆ ವಿದ್ಯಾರ್ಜನೆಗೈಯಬೇಕು. ಸರ್ಕಾರಿ ಶಾಲೆಗಳು ಮಕ್ಕಳಲ್ಲಿ ಆತ್ಮವಿಶ್ವಾಸ ಹೆಚ್ಚಿಸುತ್ತವೆ ಎಂದರು.

ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಮಾತನಾಡಿ, ಸರಕಾರಿ ಶಾಲೆಗಳ ಸಬಲೀಕರಣಕ್ಕೆ ಎಲ್ಲರ ಸಹಕಾರ ಮುಖ್ಯವಾಗಿದೆ ಎಂದರಲ್ಲದೆ, ಮಕ್ಕಳಿಗೆ ಟೈ-ಬೆಲ್ಟ್ ಕೊಡುಗೆ ನೀಡಿದ ಮಹನೀಯರನ್ನು ಅಭಿನಂದಿಸಿದರು. ಅತಿಥಿಗಳಾಗಿ ಆಗಮಿಸಿದ್ದ ಧುರೀಣ ಹೋಳೇಬಸಪ್ಪ ಅಕ್ಕಿ ಮಾತನಾಡಿ, ಸರ್ಕಾರಿ ಶಾಲೆಗಳನ್ನು ಪ್ರೋತ್ಸಾಹಿಸುವ ಮೂಲಕ ಶಾಲೆಗಳ ಉಳಿವಿಗಾಗಿ ನಾವೆಲ್ಲರೂ ಶ್ರಮಿಸಬೇಕಾಗಿದ್ದು, ದಾಖಲಾತಿ ಹೆಚ್ಚಳಕ್ಕೆ ಎಲ್ಲರೂ ಸೇರಿ ಪ್ರಯತ್ನಿಸೋಣ ಎಂದರು.



ಮುಖ್ಯೋಪಾಧ್ಯಾಯರಾದ ಎಂ.ಎಂ. ಮಕಾನದಾರ ಮಾತನಾಡಿದರು. ಎಸ್.ಬಿ. ಜಕ್ಕನಗೌಡ್ರ ಸ್ವಾಗತಿಸಿ ವಂದಿಸಿದರು.

### ಉಭಯ ಶ್ರೀಗಳ ಜಾತ್ರಾ ಮಹೋತ್ಸವ

# ಶಿವಾನುಭವಗೋಷ್ಠಿ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಪರಮಪೂಜ್ಯ ಲಿಂ. ಪಂ. ಪಂಚಾಕ್ಷರಿ ಗವಾಯಿಗಳವರ 81ನೇ ಹಾಗೂ ಪದ್ಮಭೂಷಣ ಲಿಂ.ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ 15ನೇ ಪುಣ್ಯಸ್ಮರಣೋತ್ಸವ ಹಾಗೂ ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ ಜೂನ್ 15ರಂದು ಸಂಜೆ 6 ಗಂಟೆಗೆ ಶಿವಾನುಭವಗೋಷ್ಠಿ ಕಾರ್ಯಕ್ರಮ ಜರುಗಲಿದೆ.

ಕಾರ್ಯಕ್ರಮದ ಸಾನ್ನಿಧ್ಯವನ್ನು ಗದುಗಿನ ತೋಂಟದಾರ್ಯ ಮಠದ ಡಾ.ಸಿದ್ಧರಾಮ ಮಹಾಸ್ವಾಮಿಗಳು ವಹಿಸುವವರು. ಚಿತ್ತರಗಿ-ಇಳಕಲ್ ಸಂಸ್ಥಾನ ಮಠದ ಪೂಜ್ಯಶ್ರೀ ಗುರು ಮಹಾಂತ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸುವರು. ತೋರಗಲ್ಲ ಗಚ್ಚಿನ ಹಿರೇಮಠದ ಪೂಜ್ಯಶ್ರೀ ಚೆನ್ನಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಹೂವಿನಶಿಗ್ಲಿ ವಿರಕ್ತಮಠದ ಪೂಜ್ಯಶ್ರೀ ಚನ್ನವೀರ ಮಹಾಸ್ವಾಮಿಗಳು ನೇತೃತ್ವ ವಹಿಸುವರು.

ಗುಳೇದಗುಡ್ಡ ಮುರುಘಾಮಠದ ಪೂಜ್ಯಶ್ರೀ ಕಾಶೀನಾಥ ಮಹಾಸ್ವಾಮಿಗಳು, ಬೊಮ್ಮನಹಳ್ಳಿ ವಿರಕ್ತಮಠದ ಪೂಜ್ಯಶ್ರೀ ಶಿವಯೋಗೇಶ್ವರ ಮಹಾಸ್ವಾಮಿಗಳು, ಅಲಮೇಲ ಗುರು ಸಂಸ್ಥಾನ ಹಿರೇಮಠದ ಪೂಜ್ಯಶ್ರೀ ಚಂದ್ರಶೇಖರ ಶಿವಾಚಾರ್ಯರು, ಎಚ್.ಎಸ್. ವೆಂಕಟಾಪುರದ ಪೂಜ್ಯಶ್ರೀ ಗುರುಸಿದ್ದೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ಕೂಡಲ ಗುರುನಂಜೇಶ್ವರ ಮಠದ ಪೂಜ್ಯಶ್ರೀ ಗುರು ಮಹೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಲಿಂಗಸೂರಿನ ಮಾಣಿಕೇಶ್ವರಿ ಆಶ್ರಮದ ಪೂಜ್ಯಶ್ರೀ ಶಿವಶರಣೆ ನಂದೀಶ್ವರಿ ಅಮ್ಮನವರು ಸಮ್ಮುಖ ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದ ಜಗದೀಶ ಶೆಟ್ಟರ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಮಾಜಿ ಸಚಿವರಾದ ಬಿ. ಶ್ರೀರಾಮುಲು, ಎಸ್.ಎಸ್. ಪಾಟೀಲ, ಮಾಜಿ ಶಾಸಕ ಬಿ.ಆರ್. ಯಾವಗಲ್, ಶಾಸಕ ಎನ್.ಹೆಚ್. ಕೋನರೆಡ್ಡಿ, ಪದ್ಮನಾಭ ಕುಂದಾಪುರ, ಪ್ರಕಾಶ ಹೊಸಮನಿ, ವೀರೇಶ್ವರ ಪುಣ್ಯಾಶ್ರಮ ಸೋಲ್ ಟ್ರಸ್ಟ್‌ನ ಸದಸ್ಯರುಗಳಾದ ಸಂಗಮೇಶ ದುಂದೂರ, ಪರಶುರಾಮ ಕಟ್ಟಿಮನಿ, ರಾಜು ರೇವಣಕರ, ಕೆ.ಟಿ. ಹಾಲಸ್ವಾಮಿ, ಎಂ.ಪಿ. ಓಂಕಾರೇಶ್ವರಿ, ನಾಗೇಶ ಮುಂಡಾಸ, ಅರುಣ ಕಟ್ಟಿಮನಿ, ಗದುಗಿನ ವಿಶಾಲ ಪವಾರ, ಬಾಲಚಂದ್ರ ತೊದಲಬಾಗಿ, ಎನ್. ರಾಮರಾವ್, ನೂರುದ್ದಿನ ಹಣಗಿ ಮುಂತಾದವರು ಪಾಲ್ಗೊಳ್ಳುವರು.

ಇದೇ ಸಂದರ್ಭದಲ್ಲಿ ತುರುವಿಹಾಳದ ಕರಲಿಂಗಪ್ಪ ಹಳ್ಳಿ, ಬೆಳವಣಿಕೆಯ ರುದ್ರಪ್ಪ ಶಿವಸಿಂಪಿ, ಗೊಂಡಬಾಳದ ಮಂಜು ಉಮಾಚಗಿ ಬೆಳವಣಿಕೆಯ ಸುಭಾಷ ಶಿವಸಿಂಪಿ, ಆಲೂರಿನ ಸಂಗಯ್ಯಶಾಸ್ತ್ರಿಗಳು ಹಿರೇಮಠ, ಮಲ್ಲಣ್ಣ ಬೂದಿಹಾಳ, ಬಸವರಾಜ ಕೊಡಗಲಿ, ಮುತ್ತಪ್ಪ ವಾಲೀಕಾರ, ಭೀಮಣ್ಣ ಹಾದಿಮನಿ, ಎಚ್.ಈ.ಅಂಜನೇಯ, ಸಿದ್ಲಿಂಗಪ್ಪ ಶಿವಶಿಂಪಿ, ಬಸವರಾಜ ಹಳ್ಳಿಕೇರಿ, ಶಿವು ಭಜಂತ್ರಿ, ಮಲ್ಲು ಬೀಳಗಿ, ಮಲ್ಲಿಕಾರ್ಜುನ ಹಿರೇಗೌಡ್ರ, ಸಿದ್ದರಾಮ ಪಾಟೀಲ, ಮಲ್ಲಪ್ಪ ತುಂಬಗಿ ಅವರುಗಳನ್ನು ಸನ್ಮಾನಿಸಲಾಗುವುದು. ರಾತ್ರಿ 10 ಗಂಟೆಗೆ ಸಂಗೀತ ಸಭೆ ಸ್ವರ ಸಮಾರಾಧನೆ ಕಾರ್ಯಕ್ರಮ ಜರಗಲಿದೆ ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

> ಇದಕ್ಕೂ ಮುನ್ನ ಬೆಳಿಗ್ಗೆ 11 ಗಂಟೆಗೆ ಸನ್ಮಾನ ಕಾರ್ಯಕ್ರಮ ಜರುಗುವುದು. ಈ ಕಾರ್ಯಕ್ರಮದಲ್ಲಿ ಕಪೋತಗಿರಿ ನಂದಿವೇರಿ ಮಠದ ಪೂಜ್ಯಶ್ರೀ ಶಿವಕುಮಾರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಅಡ್ನೂರ-ರಾಜೂರು ಬ್ರಹನ್ಮಠದ ಪೂಜ್ಯಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸುವರು. ಪೂಜ್ಯಶ್ರೀ ಡಾ. ಕಲ್ಲಯ್ಯಜ್ಜನವರು ಸಮ್ಮುಖ ವಹಿಸುವರು.

# ಶೇ.100ರ ಗುರಿ ಸಾಧನೆಯ ಧ್ಯೇಯ

▶▶ ಮೊದಲನೇ ಪುಟದಿಂದ

ಮಲ್ಲಸಮುದ್ರ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ ಸದಸ್ಯರಾದ ಬಸವರಾಜ ಕಡೇಮನಿ, ಕುಸುಮಾ ಬೆಳಗಟ್ಟಿ, ಮಹಮ್ಮದಸಾಬ್ ಬೆಟಗೇರಿ, ಸಮೀರ್ ಕೊಟ್ಟೂರ, ವಾಣಿ ಹಿರೇಮಠ ಹಾಗೂ ಕಂಪ್ಯೂಟರ್ ಆಪರೇಟರ್‌ಗಳಾದ ವಿಠಲ್ ರಾಠೋಡ, ರಮೇಶ ಬಾರಿಗಿಡದ, ವಿನಾಯಕ ಕುರಿ ಇದ್ದರು.

ಚಿಕ್ಕಪ್ಪ ಮುಳಗುಂದ ಆಹಾರ ಇಲಾಖೆಯ, ಟಿ.ಆರ್. ಹೊಸಳ್ಳಿ ಹೆಸ್ಕಾಂ, ಆನಂದ ಹೊಂಬಳ ಯುವನಿಧಿ ಕುರಿತ ಸಮಸ್ಯೆಗಳನ್ನು ಪರಿಹರಿಸಿದರು.

# ಡೆಂಗೀ ಜಾಗೃತಿ ಕಾರ್ಯಕ್ರಮ



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಮಲ್ಲಸಮುದ್ರದ ರಾಣಿ ಚನ್ನಮ್ಮ ಪ್ರೌಢಶಾಲೆಯಲ್ಲಿ ಡೆಂಗೀ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಹರ್ತಿಯ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯ ನಿರೀಕ್ಷಣಾಧಿಕಾರಿ ಮಂಜುನಾಥ ಸಜ್ಜನರ ಮಾತನಾಡಿ, ಜ್ವರವಿದ್ದರೆ ಅಲಕ್ಷ್ಯ ಮಾಡದೇ ತಪಾಸಣೆ ಮಾಡಿಸಿ. ಮಳೆ ಆಗುತ್ತಿರುವುದರಿಂದ ಡೆಂಗೀ, ಚಿಕುನ್ ಗುನ್ಯಾಗಳಂತಹ ಕಾಯಿಲೆಗಳು ವೇಗವಾಗಿ ಹಬ್ಬುತ್ತವೆ. ಕಾರಣ, ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದರು. ಜಿಲ್ಲಾ ಉಪ ಆರೋಗ್ಯ ಶಿಕ್ಷಣಾಧಿಕಾರಿ ಪುಷ್ಪಾ ಪಾಟೀಲ ಮಾತನಾಡಿ, ಕೀಟಜನ್ಯ ರೋಗಗಳಾದ ಡೆಂಗೀ, ಚಿಕುನ್‌ಗುನ್ಯಾ ತಡೆಯಲು ರೋಗಗಳ ಬಗ್ಗೆ ಜಾಗೃತಿಯಿಂದ ಇರುವುದು ಅತ್ಯಗತ್ಯ ಎಂದು ತಿಳಿಸಿದರು.

ಸಮುದಾಯ ಆರೋಗ್ಯ ಅಧಿಕಾರಿ ರಾಧಿಕಾ ಶಾಪೂರ ಮಾತನಾಡಿ, ಕುಡಿದ ನೀರಿನ ಬಾಟಲ್ ಹಾಗೂ ಪ್ಲಾಸ್ಟಿಕ್ ಕಪ್‌ಗಳನ್ನು ಎಲ್ಲೆಂದರಲ್ಲಿ ಬಿಸಾಕದೆ ಸ್ವಚ್ಛತೆ ಕಾಪಾಡಿ ಎಂದು ತಿಳಿಸಿದರು.

### ಭೋರ್ಗರೆದು ಹರಿಯುತ್ತಿರುವ ಬೆಣ್ಣೆಹಳ್ಳ

# ನೂರಾರು ಹೆಕ್ಟೇರ್ ಪ್ರದೇಶದಲ್ಲಿ ಬೆಳೆಹಾನಿ



■ ವಿಜಯಸಾಕ್ಷಿ ಸುದ್ದಿ, ರೋಣ

ಬೆಳಗಾವಿ ಮತ್ತು ಧಾರವಾಡ ಜಿಲ್ಲೆಯಲ್ಲಿ ಧಾರಕಾರ ಮಳೆ ಸುರಿದ ಹಿನ್ನೆಲೆಯಲ್ಲಿ ರೋಣ ತಾಲೂಕಿನ ಬೆಣ್ಣೆಹಳ್ಳ ಸಂಪೂರ್ಣ ತುಂಬಿ ಹರಿಯುತ್ತಿದ್ದು, ನೂರಾರು ಹೆಕ್ಟೇರ್ ಪ್ರದೇಶದಲ್ಲಿ ಬೆಳೆಹಾನಿ ಸಂಭವಿಸಿದೆ. ವಿಷಯ ಆಲಿಸಿದ ತಕ್ಷಣ ಕೃಷಿ ಇಲಾಖೆಯ ಸಹಾಯಕ ಕೃಷಿ ನಿರ್ದೇಶಕ ರವೀಂದ್ರ ಪಾಟೀಲ ಯಾವಗಲ್ಲ, ಅಸೂಟಿ, ಕುರಡಗಿ ಗ್ರಾಮಗಳಿಗೆ ತೆರಳಿ ಪರಿಶೀಲನೆ ನಡೆಸಿ ರೈತರಿಗೆ ಧೈರ್ಯ ತುಂಬಿದರು.

ಬುಧವಾರ ಮಧ್ಯರಾತ್ರಿಯಿಂದ ಬೆಣ್ಣೆಹಳ್ಳ ಪ್ರವಾಹರೂಪಿಯಾಗಿ ಹರಿಯುತ್ತಿದ್ದು, ಸುತ್ತಮುತ್ತಲಿನ ಹತ್ತಾರು ಗ್ರಾಮಗಳ ರೈತರು ತೀವ್ರ ಸಂಕಷ್ಟ ಅನುಭವಿಸುವಂತಾಗಿದೆ. ಈಗಾಗಲೇ ಮುಂಗಾರು ಹಂಗಾಮಿನ ಪ್ರಮುಖ ಬೆಳೆಯಾದ ಹೆಸರು ಬಿತ್ತನೆಯಾಗಿದ್ದು, ಇನ್ನೇನು ಬೆಳೆ ಎತ್ತರಕ್ಕೆ ಬೆಳೆಯುತ್ತೆ ಎಂಬ ನಿರೀಕ್ಷೆ ಹೊಂದಿದ್ದ ರೈತ ಸಮುದಾಯ ಈಗ ಕೈಚೆಲ್ಲುವಂತೆ ಆಗಿದೆ. ಮೈದುಂಬಿ ಹರಿಯುತ್ತಿರುವ ಬೆಣ್ಣೆಹಳ್ಳದ ನೀರು ಬೆಳೆಗಳನ್ನು ಕೊಚ್ಚಿಹೊಗುವಂತೆ ಮಾಡಿದೆ. ಬೆಣ್ಣೆಹಳ್ಳ ಒಮ್ಮೆ ತುಂಬಿ ಹರಿಯತೊಡಗಿದರೆ ಶಾಂತವಾಗಲು ಎರಡು ದಿನಗಳಾದರೂ ಬೇಕು. ಆದರೆ ಈ ಬಾರಿ ದೊಡ್ಡ ಪ್ರಮಾಣದಲ್ಲಿ ನೀರು ಹರಿಯುತ್ತಿದ್ದು, ಹಳ್ಳದ ರಭಸ ಕಡಿಮೆಯಾಗಲು ನಾಲ್ಕು ದಿನಗಳೇ ಬೇಕು ಎನ್ನುತ್ತಾರೆ ರೈತರು. ಬೆಣ್ಣೆಹಳ್ಳದ ಪ್ರವಾಹದಿಂದ ರೋಣ, ನರಗುಂದ, ಹೊಳೆಆಲೂರ, ಮೆಣಸಗಿ, ಮೆಣಸಗಿ ಕೊಣ್ಣೂರ ಸೇರಿದಂತೆ ಸುತ್ತಮುತ್ತಲಿನ 20ಕ್ಕೂ ಹೆಚ್ಚು ಗ್ರಾಮಗಳು ರಸ್ತೆ ಸಂಪರ್ಕವನ್ನು ಕಳೆದುಕೊಂಡಿವೆ. ಒಟ್ಟಿನಲ್ಲಿ ಪ್ರವಾಹ ರೂಪದಲ್ಲಿ ಹರಿಯುತ್ತಿರುವ ಬೆಣ್ಣೆಹಳ್ಳ ಜನರಲ್ಲಿ ಆತಂಕವನ್ನು ಸೃಷ್ಟಿಸಿದೆ.

> ಬೆಣ್ಣೆಹಳ್ಳದ ನೀರು ಕೃಷಿ ಜಮೀನುಗಳಿಗೆ ನುಗ್ಗಿದ್ದು, ಪರಿಶೀಲನೆ ನಡೆಸಲಾಗಿದೆ. ರೈತರಿಗೂ ಸಹ ಧೈರ್ಯ ತುಂಬಲಾಗಿದೆ. ಹಿರಿಯ ಅಧಿಕಾರಿಗಳ ಗಮನಕ್ಕೂ ತರಲಾಗಿದ್ದು, ನಾನು ಸಹ ಸ್ಥಳದಲ್ಲಿದ್ದೇನೆ.
>
> **– ರವೀಂದ್ರ ಪಾಟೀಲ.**
> ಸಹಾಯಕ ಕೃಷಿ ನಿರ್ದೇಶಕರು.


> ನನ್ನ ತಿಳುವಳಿಕೆಯಂತೆ ಈ ಪ್ರಮಾಣದಲ್ಲಿ ಬೆಣ್ಣೆಹಳ್ಳ ತುಂಬಿದ್ದಿಲ್ಲ. ಬೆಣ್ಣೆಹಳ್ಳ ಬಂದ ಸಂದರ್ಭದಲ್ಲಿ ಮಲಪ್ರಭಾ ನದಿ ನೀರನ್ನು ಬಿಟ್ಟಾಗ ಮಾತ್ರ ಪ್ರವಾಹ ರೀತಿಯಲ್ಲಿ ಹಳ್ಳ ಹರಿಯುತ್ತಿತ್ತು. ಜಮೀನುಗಳಿಗೆ ಸಾಕಷ್ಟು ಪ್ರಮಾಣದಲ್ಲಿ ಹಾನಿಯಾಗಿದೆ ಮತ್ತು ಬೆಳೆಗಳು ಸಹ ನೀರಲ್ಲಿ ಮುಳುಗಿವೆ.
>
> **– ಮುತ್ತಣ್ಣ ಕುರಿ.**
> ರೈತರು, ಯಾವಗಲ್ಲ.

# ಬಿವಿವಿಯಲ್ಲಿ ಶಾಲಾ ಚುನಾವಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಬಾಲ ವಿನಾಯಕ ವಿದ್ಯಾನಿಕೇತನದಲ್ಲಿ ಶಾಲಾ ನಾಯಕ-ನಾಯಕಿ ಮತ್ತು ಉಪ ನಾಯಕ-ಉಪನಾಯಕಿಯರನ್ನು ಆಯ್ಕೆ ಮಾಡಲು ಶಾಲಾ ಸಂಸತ್ ಚುನಾವಣೆಯನ್ನು ನಡೆಸಲಾಯಿತು.

ಸಾರ್ವತ್ರಿಕ ಚುನಾವಣೆಯಲ್ಲಿ ಪಾಲಿಸಲಾಗುವ ಎಲ್ಲಾ ಹಂತಗಳನ್ನು ಪಾಲಿಸಲಾಯಿತು. ಚುನಾವಣಾ ಘೋಷಣೆಯಿಂದ ಹಿಡಿದು, ನಾಮಪತ್ರ ಸಲ್ಲಿಕೆ, ಅಭ್ಯರ್ಥಿಗಳ ಪ್ರಚಾರ ಭಾಷಣ, ಅಭ್ಯರ್ಥಿಗಳ ಪರವಾಗಿ ಪೋಸ್ಟರ್ ಮೇಕಿಂಗ್ ಸ್ಪರ್ಧೆ, ಚುನಾವಣಾ ಜಾಗೃತಿ ನಾಟಕ, ಕೊನೆಯಲ್ಲಿ ಮತದಾನದ ಹಂತಗಳನ್ನು ಪಾಲಿಸಲಾಯಿತು.




ಶಾಲೆಯ ಯುವ ಪೀಳಿಗೆಯಲ್ಲಿ ಚುನಾವಣೆ ಮತ್ತು ಮತದಾನದ ಮಹತ್ವವನ್ನು ತಿಳಿಸಿಕೊಡುವ ಉದ್ದೇಶದಿಂದ ವಿಶೇಷ ಶ್ರಮವಹಿಸಿ ಎಲೆಕ್ಟ್ರಾನಿಕ್ ವೋಟಿಂಗ್ ಮಷಿನ್ ಮಾದರಿಯ ಸಾಫ್ಟ್‌ವೇರ್ ತಯಾರಿಸಿ ಅದರಲ್ಲಿ ವಿದ್ಯಾರ್ಥಿಗಳು ತಮ್ಮ ಅಮೂಲ್ಯವಾದ ಮತಗಳನ್ನು ಚಲಾಯಿಸುವ ಮೂಲಕ ತಮ್ಮ ನಾಯಕ-ನಾಯಕಿಯರನ್ನು ತಾವೇ ಆಯ್ಕೆ ಮಾಡಿದರು.

ಶಾಲಾ ಚುನಾವಣಾ ಅಧಿಕಾರಿಯಾಗಿ ಹಿರಿಯ ಶಿಕ್ಷಕಿ ಸವಿತಾ ತುಕೋಳ ಕಾರ್ಯ ನಿರ್ವಹಿಸಿದರು.

# ಟಿಪ್ಪರ್-ಬಸ್ ಡಿಕ್ಕಿ: ಹಲವರಿಗೆ ಗಾಯ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶುಕ್ರವಾರ ರಾತ್ರಿ 10.30ರ ಹೊತ್ತಿಗೆ ಮರಳು ಖಾಲಿ ಮಾಡಿಕೊಂಡು ಸವಣೂರ ಕಡೆಯಿಂದ ಲಕ್ಷ್ಮೇಶ್ವರದ ಕಡೆ ಬರುತ್ತಿದ್ದ ಟಿಪ್ಪರ್ ಹಾಗೂ ಗದಗದಿಂದ ಬೆಂಗಳೂರು ಕಡೆ ಹೊರಟಿದ್ದ ಖಾಸಗಿ ಬಸ್ ನಡುವೆ ನಡೆದ ಅಪಘಾತದಲ್ಲಿ ಕೆಲವರು ತೀವ್ರ ಗಾಯಗೊಂಡಿರುವ ಘಟನೆ ಜರುಗಿದೆ. ಟಿಪ್ಪರ್ ಹಾಗೂ ಬಸ್ ಚಾಲಕರಿಗೆ ಗಾಯಗಳಾಗಿದ್ದು, ಸರಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದಾರೆ.

ಪಟ್ಟಣದ ಅಗಡಿ ಇಂಜಿನಿಯರಿಂಗ್ ಕಾಲೇಜು ಬಳಿ ಅಪಘಾತ ಸಂಭವಿಸಿದ್ದು, ಢಿಕ್ಕಿಯ ರಭಸಕ್ಕೆ ಟಿಪ್ಪರ್ ಕಂದಕಕ್ಕೆ ಉರುಳಿದೆ. ಬಸ್ ಮೇಲಿನ ಸ್ಲೀಪರ್ ಕೋಚ್ ಕಿಟಕಿ ಗಾಜುಗಳು ಒಡೆದು ಬಲಭಾಗ ನುಜ್ಜುಗುಜ್ಜಾಗಿದೆ.

ಟಿಪ್ಪರ್ ಚಾಲಕ ಬಸಾಪೂರ ಮೂಲದ, ಸದ್ಯ ಆದರಳ್ಳಿಯಲ್ಲಿ ವಾಸವಾಗಿರುವ ಸಂತೋಷ ಲಕ್ಷ್ಮಣ ಪೂಜಾರ (24) ಎಂದು ತಿಳಿದುಬಂದಿದೆ.

ಈತನಿಗೆ ಬಲಗಾಲು ಮುರಿದಿದ್ದು, ಖಾಸಗಿ ಬಸ್ ಚಾಲಕ ಸುರೇಶ ರಾಮಚಂದ್ರಪ್ಪ ಈತನಿಗೂ ಗ್ಲಾಸ್ ಸಿಡಿದು ಗಾಯಗಳಾಗಿವೆ. ಬಸ್‌ನಲ್ಲಿ 35ಕ್ಕೂ ಅಧಿಕ ಪ್ರಯಾಣಿಕರಿದ್ದು, ಗಾಯಗೊಂಡವರಿಗೆ ಲಕ್ಷ್ಮೇಶ್ವರದ ಸರಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗಿದೆ. ಪಟ್ಟಣದ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿಕೊಳ್ಳಲಾಗಿದೆ.

## 'ಶರಣು ಸಮರ್ಪಣ' ಕಾರ್ಯಕ್ರಮದಲ್ಲಿ ಸಭಾಪತಿ ಬಸವರಾಜ್ ಹೊರಟ್ಟಿ ವಿಷಾದ

# ಶಿಕ್ಷಕರು ಹೋರಾಟಗಳಿಗೆ ಬರುತ್ತಿಲ್ಲ

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಇಂದು ಖಾಸಗಿ ಶಾಲಾ-ಕಾಲೇಜು ಶಿಕ್ಷಕರು ನೆಮ್ಮದಿಯಿಂದ ಇದ್ದರೆ ಅದಕ್ಕೆ ಬಲಿಷ್ಠ ಸಂಘಟನೆ, ಹೋರಾಟಗಳೇ ಕಾರಣ ಎಂಬುದನ್ನು ಯಾರೂ ಮರೆಯಬಾರದು ಎಂದು ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಅವರು ಪಟ್ಟಣದ ಡಿ.ಜಿ. ಪೂಜಾರರ ಸೇವಾ ನಿವೃತ್ತಿಯ ನಿಮಿತ್ತ ರೋಟರಿ ಶಿಕ್ಷಣ ಸಂಸ್ಥೆಯ ಆವಣದಲ್ಲಿ ಏರ್ಪಡಿಸಿದ್ದ 'ಶರಣು ಸಮರ್ಪಣ' ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.

ಸರ್ಕಾರಿ ಹಾಗೂ ಖಾಸಗಿ ಶಾಲೆಗಳ ಶಿಕ್ಷಕರ ತಾರತಮ್ಯದ ವಿರುದ್ಧ ಹಾಗೂ ಖಾಸಗಿ ಶಾಲೆಯಲ್ಲಿ ಶಿಕ್ಷಕರ ಸೇವಾ ಭದ್ರತೆಯ ಆತಂಕವನ್ನು ದೂರ ಮಾಡಲು 1975ರಿಂದಲೇ ಹೋರಾಟ ಮಾಡುತ್ತಾ ಬಂದಿರುವ ಫಲದಿಂದಾಗಿ ಖಾಸಗಿ ಶಾಲೆ ಶಿಕ್ಷಕರು ಇಂದು ನೆಮ್ಮದಿಯಿಂದ ಸೇವೆ ಮಾಡುತ್ತಿದ್ದಾರೆ. ಆದರೆ ಹೋರಾಟದಿಂದಲೇ ಎಲ್ಲವನ್ನೂ ಪಡೆದ ಈ ಶಿಕ್ಷಕರು ಹಾಗೂ ಯುವ ಶಿಕ್ಷಕರು ಇತ್ತೀಚಿನ ಹೋರಾಟಗಳಿಗೆ ಬರುತ್ತಿಲ. ಇದರ ಪರಿಣಾಮವನ್ನು ಅವರೇ ಆತ್ಮಾವಲೋಕನ ಮಾಡಿಕೊಳ್ಳಲಿ.



1980ರ ಕಾಲದಲ್ಲಿ ಒಂದು ಕರೆ ಕೊಟ್ಟರೆ ಸಾವಿರ ಸಾವಿರ ಶಿಕ್ಷಕರು ಧಾರವಾಡದಲ್ಲಿ ಸೇರುತ್ತಿದ್ದರು. ಆದರೆ ಇತ್ತೀಚೆಗೆ ಹೋರಾಟಗಳೇ ಇಲ್ಲವಾಗಿವೆ ಎಂದು ವಿಷಾದ ವ್ಯಕ್ತಪಡಿಸಿದರು.

ಅವ್ವ ಸೇವಾ ಟ್ರಸ್ಟ್‌ನ ಗದಗ ಜಿಲ್ಲಾ ಸಂಚಾಲಕ ಡಾ. ಬಸವರಾಜ ಧಾರವಾಡ ಮಾತನಾಡಿ, ಶಿಕ್ಷಕರು ಸಂಘಟನೆ, ಹೋರಾಟದತ್ತ ಗಮನಹರಿಸಬೇಕಿದೆ. ನಿವೃತ್ತಿ ಹೊಂದಿದ ಡಿ.ಜಿ. ಪೂಜಾರ್ ವಿಶೇಷ ಅರ್ಥಪೂರ್ಣ ಕಾರ್ಯಕ್ರಮ ಏರ್ಪಡಿಸಿ ಉಪಕಾರ ಮಾಡಿದ ಎಲ್ಲ ಮಹನೀಯರಿಗೆ ಶರಣು ಸಮರ್ಪಣೆ ಸಲ್ಲಿಸುವ ಒಂದು ಮಾದರಿ ಕಾರ್ಯಕ್ರಮವನ್ನು ಆಯೋಜಿಸಿದ್ದು ಶೈಕ್ಷಣಿಕ ಕ್ಷೇತ್ರದಲ್ಲಿ ಒಂದು ಮೈಲುಗಲ್ಲು ಎಂದರು.

ಡಿ.ಜಿ. ಪೂಜಾರ್ ಕುಟುಂಬದವರು ಉಪಕಾರ ಮಾಡಿದ ಎಲ್ಲ ಮಹನೀಯರಿಗೆ ಗೌರವ ಸಮರ್ಪಣೆ ಸಲ್ಲಿಸಿದರು. ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರುಡಗಿ ಅಧ್ಯಕ್ಷತೆ ವಹಿಸಿದ್ದರು. ರಾಜ್ಯ ಕುರಿ ಮತ್ತು ಉಣ್ಣೆ ನಿಗಮದ ಮಾಜಿ ಅಧ್ಯಕ್ಷ ವೈ. ಎನ್. ಗೌಡರ, ನಿವೃತ್ತ ಶಿಕ್ಷಕ ಡಿ.ಜಿ. ಪೂಜಾರ್, ಡಿಡಿಪಿಐ ಆರ್.ಎಸ್. ಬುರುಡಿ, ಬಿ.ಇ.ಒ ಎಚ್.ಎಂ. ಪಡ್ನೇಶಿ, ಸಂಪನ್ಮೂಲ ಅಧಿಕಾರಿ ಜಿ.ಎಸ್. ಅಣ್ಣಿಗೇರಿ, ಕೆಎಂಎಫ್ ನಿರ್ದೇಶಕ ಲಿಂಗನಗೌಡ ಪಾಟೀಲ್, ಜಿ.ಬಿ. ಬಸವಣ್ಣಪ್ಪ, ಕೊಟ್ರೇಶ್ ಅಂಗಡಿ, ಡಿ.ಜಿ. ಮೊರ್ನಾಳ, ನಾಗರಾಜ್ ಹಳ್ಳಿಕೇರಿ, ಎಚ್. ಎಂ. ರಾಥೋಡ್, ರುದ್ರಗೌಡ ಪಾಟೀಲ್, ಎಸ್.ಎಸ್. ಗಡ್ಡದ, ಡಾ. ಬಿ.ಜಿ. ಜವಳಿ ಇದ್ದರು. ಎಸ್.ಎಂ. ಅಗಡಿ ಸ್ವಾಗತಿಸಿದರು. ಎಸ್.ಬಿ. ಗಿಂಡಿಮಠ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

> ನಿವೃತ್ತಿ ಹೊಂದಿದ ಡಿ.ಜಿ. ಪೂಜಾರ್ ಒಬ್ಬ ಆದರ್ಶ ಶಿಕ್ಷಕ. ತನ್ನ ಸೇವಾ ಅವಧಿ ಉದ್ದಕ್ಕೂ ಹಾಗೂ ಕಲಿಸಿದ ಗುರುಗಳಿಗೆ ನೆರವಾದ ಮಹನೀಯರಿಗೆ ಶರಣು ಸಮರ್ಪಣೆ ಕಾರ್ಯಕ್ರಮ ಏರ್ಪಡಿಸುವ ಮೂಲಕ ನಮಗೆಲ್ಲ ಮಾದರಿಯಾಗಿದ್ದಾರೆ. ಈ ಕಾರ್ಯಕ್ರಮ ಅತ್ಯಂತ ಅರ್ಥಪೂರ್ಣವಾಗಿದ್ದು, ಇದೊಂದು ಉತ್ತಮ ಪರಂಪರೆ ಎಂದು ಬಸವರಾಜ ಹೊರಟ್ಟಿ ಪೂಜಾರ್ ದಂಪತಿಗಳಿಗೆ ಶುಭ ಕೋರಿದರು.

## ಕರವೇ ಜಿಲ್ಲಾಧ್ಯಕ್ಷ ಎಂ.ಪಿ ಪರ್ವತಗೌಡ್ರ ನೇತೃತ್ವದಲ್ಲಿ ಪ್ರತಿಭಟನೆ, ಮನವಿ ಸಲ್ಲಿಕೆ

# ಕಮಲ್ ಹಾಸನ್ ಚಿತ್ರ ರಾಜ್ಯದಲ್ಲಿ ಬಿಡುಗಡೆಗೊಳ್ಳಬಾರದು




> ಕಮಲ್ ಹಾಸನ್ ತಮ್ಮ ನೂತನ ಚಿತ್ರ ಬಿಡುಗಡೆಗೆ ಆಗ್ರಹಿಸಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ಶುಕ್ರವಾರ ನಡೆದಿದೆ. ಕಮಲ್ ಹಾಸನ್ ಕನ್ನಡಿಗರ ಬಳಿ ಕ್ಷಮೆ ಕೇಳಿದಿರುವುದನ್ನು ತಿಳಿದ ನ್ಯಾಯಾಧೀಶರು ಜೂನ್ 20ಕ್ಕೆ ವಿಚಾರಣೆ ಮುಂದೂಡಿದ್ದಾರೆ. ಕೋರ್ಟ್ ಛೀಮಾರಿ ಹಾಕುತ್ತಿದ್ದರೂ ಕಮಲ್ ಹಾಸನ್ ಅವರಿಗೆ ಮರ್ಯಾದೆ ಇಲ್ಲವೇ?
>
> – ಎಂ.ಪಿ. ಪರ್ವತಗಡ್ರ,
> ಕರವೇ ಜಿಲ್ಲಾಧ್ಯಕ್ಷರು.

■ ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡವನ್ನು ಅವಮಾನಿಸಿದ ಬಹುಭಾಷಾ ನಟ ಕಮಲ್ ಹಾಸನ್‌ರ ಚಿತ್ರವನ್ನು ಕರ್ನಾಟಕದಲ್ಲಿ ಯಾವುದೇ ಕಾರಣಕ್ಕೂ ಬಿಡುಗಡೆ ಮಾಡಬಾರದು ಎಂದು ಆಗ್ರಹಿಸಿ ತಹಸೀಲ್ದಾರರ ಮೂಲಕ ಕರ್ನಾಟಕ ರಕ್ಷಣಾ ವೇದಿಕೆಯ ಹೆಚ್. ಶಿವರಾಮೇಗೌಡ್ರ ಬಣದಿಂದ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಇದಕ್ಕೂ ಮುನ್ನ ಪಾಲಾ-ಬಾದಾಮಿ ರಾಷ್ಟ್ರೀಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದರು. ನಂತರ ತಹಸೀಲ್ದಾರ ಕಛೇರಿಯವರೆಗೆ ಜಿಲ್ಲಾಧ್ಯಕ್ಷ ಎಂ.ಪಿ ಪರ್ವತಗೌಡ್ರ ನೇತೃತ್ವದಲ್ಲಿ ಪಾದಯಾತ್ರೆ ನಡೆಸಲಾಯಿತು.

ಈ ವೇಳೆ ಮಾತನಾಡಿದ ಜಿಲ್ಲಾಧ್ಯಕ್ಷ ಎಂ.ಪಿ. ಪರ್ವತಗೌಡ್ರ, ಕಮಲ್ ಹಾಸನ್ ಕನ್ನಡಿಗರ ಋಣದಲ್ಲಿ ಬದುಕುತ್ತಿದ್ದಾರೆ. ಕರ್ನಾಟಕದಲ್ಲಿ ಅವರ ಅಭಿಮಾನಿಗಳ ಸಂಖ್ಯೆ ಕೂಡ ಹೆಚ್ಚಾಗಿತ್ತು. ಆದರೆ, ಅವರ ಈ ಹೇಳಿಕೆಯಿಂದ ಕನ್ನಡಿಗರಿಗೆ ನೋವಾಗಿದ್ದು, ಕೂಡಲೇ ಅವರು ಕ್ಷಮೆ ಕೇಳಬೇಕು. ಕರ್ನಾಟಕ ಹೈಕೋರ್ಟ್ ಕೂಡ ಕಮಲ್ ಹಾಸನ್ ಹೇಳಿಕೆಯನ್ನು ಖಂಡಿಸಿತ್ತು. ಆದರೆ, ಹಠಮಾರಿ ಕಮಲ್ ತನ್ನ ನೀಚ ಬುದ್ಧಿ ಬಿಡದೇ ತನ್ನ ಹೇಳಿಕೆಯನ್ನು ಸಮರ್ಥಿಸಿಕೊಳ್ಳುತ್ತಿದ್ದಾರೆ. ಕನ್ನಡಿಗರ ಕ್ಷಮೆ ಕೇಳದಿದ್ದರೆ ನಾವು ಚಿತ್ರ ಬಿಡುಗಡೆಗೆ ಅವಕಾಶ ನೀಡುವುದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯ-ರಾಜ್ಯಗಳ ನಡುವೆ ಬೆಂಕಿ ಹಚ್ಚುವ ಕೆಲಸ ಮಾಡಿದರೆ ಜನ ಸಹಿಸುವುದಿಲ್ಲ. ರಾಜಕೀಯದಲ್ಲಿ ಈಗಾಗಲೇ ನೀವು ನಿಮ್ಮ ಅಸ್ತಿತ್ವ ಕಳೆದುಕೊಂಡಿದ್ದೀರಿ. ಇಂತಹ ಹೇಳಿಕೆಗಳಿಂದ ಪುಟಿದೇಳುತ್ತೇನೆ ಎನ್ನುವ ನಿಮ್ಮ ತಪ್ಪು ಕಲ್ಪನೆಯಿಂದ ದೂರವಿರಿ. ನಿಮ್ಮ ರಾಜಕಾರಣ ನಿಮ್ಮ ರಾಜ್ಯದಲ್ಲಿರಲಿ. ಆದರೆ, ಕನ್ನಡಿಗರನ್ನು ಅವಮಾನಿಸುವ ಹೇಳಿಕೆಯನ್ನು ಯಾರೂ ಸಹಿಸುವುದಿಲ್ಲ ಎಂದು ಎಚ್ಚರಿಸಿದರು. ಪ್ರತಿಭಟನೆಯ ಸಂದರ್ಭದಲ್ಲಿ ಕರವೇ ಉತ್ತರ ಕರ್ನಾಟಕ ರೈತ ಘಟಕದ ಅಧ್ಯಕ್ಷ ಬಸಯ್ಯ ಗುಡ್ಡಿಮಠ, ಜಿಲ್ಲಾ ಗೌರವಾಧ್ಯಕ್ಷ ಸುನೀಲ ಭಾರಕೇರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಸವರಾಜ ಮುಳ್ಳಾಳ, ಬಶೀರ ಮುಳಗುಂದ, ಶಂಕ್ರಪ್ಪ ಬಿಂಗಿ, ಗದಗ ತಾಲೂಕಾಧ್ಯಕ್ಷ ಸಂತೋಷ ಕುಂಬಾರ, ಪ್ರಸಾದ ಪಾಟೀಲ, ಶರಣಪ್ಪ ಅಡ್ನೂರ, ಮುತ್ತು ಬಿಳಿಯಲಿ, ಶರಣಪ್ಪ ಮಣ್ಣೂರ, ಮಂಜುನಾಥ ಕುರ್ತಕೋಟಿ, ಮೈಲಾರಿ ತಡಹಾಳ, ಕೊಟ್ರೇಶ ತಡಹಾಳ, ವಿರೇಶ ಬೊಮ್ಮಸಾಗರ ಸೇರಿದಂತೆ ಕಾರ್ಯಕರ್ತರು ಉಪಸ್ಥಿತರಿದ್ದರು.

**ಗದಗ:** ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಉಭಯ ಗುರುಗಳ ಜಾತ್ರಾ ಮಹೋತ್ಸವದಲ್ಲಿ ಶನಿವಾರ ಶಿವಮೊಗ್ಗದ ವೀರೇಶ್ವರ ಪುಣ್ಯಾಶ್ರಮದ ಶಾಖಾ ಮಠದ ಅಂಧ ವಿದ್ಯಾರ್ಥಿಗಳು ಸಂಗೀತ ಕಾರ್ಯಕ್ರಮ ನೀಡಿದರು. ಈ ಸಂದರ್ಭದಲ್ಲಿ ಮುಂಡರಗಿಯ ಡಾ. ಶ್ರೀ ಅನ್ನದಾನೀಶ್ವರ ಶಿವಯೋಗಿಗಳು ಸೇರಿದಂತೆ ವಿವಿಧ ಮಠಾಧೀಶರುಗಳು ಉಪಸ್ಥಿತರಿದ್ದರು.




# ಪರಿಸರ ಸುಸ್ಥಿರತೆಗೆ ಒತ್ತು ನೀಡಿ



■ ವಿಜಯಸಾಕ್ಷಿ ಸುದ್ದಿ, ಗದಗ

ಸಾಮಾಜಿಕ ಜವಾಬ್ದಾರಿಯ ಅರಿವು ಮೂಡಿಸುವುದರ ಮೂಲಕ ಸಮುದಾಯ ಆರೋಗ್ಯ ಮತ್ತು ಪರಿಸರ ಸುಸ್ಥಿರತೆಗೆ ಒತ್ತು ನೀಡಲು ಈ ಕಾರ್ಯಕ್ರಮ ಮುಂದಾಗಿದೆ ಎಂದು ಕಾಶಿ ಪೀಠದ ಜ. ಡಾ.ಚಂದ್ರಶೇಖರ ಶಿವಾಚಾರ್ಯ ಮಹಾಸ್ವಾಮಿಗಳ ಹೇಳಿದರು.

ಅವರು ನಗರದ ಟಾಟಾ ಮೋಟಾರ್ಸ್ ಮಾಣಿಕಬಾಗ್ ಇವರ ವತಿಯಿಂದ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣೆ ಮತ್ತು 111 ಸಸಿಗಳ ಉಚಿತ ವಿತರಣೆ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸಸಿಗಳ ಉಚಿತ ವಿತರಣೆ ಮಾಡುವುದರ ಜೊತೆಗೆ ಸ್ವಚ್ಛ ಮತ್ತು ಹಸಿರು ಗದಗದತ್ತ ಒಂದು ಹೆಜ್ಜೆಯಿಟ್ಟು, ಹಸಿರು ಹೊದಿಕೆ ಮತ್ತು ಪರಿಸರ ಜಾಗೃತಿಯನ್ನು ಮೂಡಿಸುವ ಕಾರ್ಯ ಶ್ಲಾಘನೀಯ ಎಂದು ಹೇಳಿದರು.

ಕೈಗಾರಿಕೋದ್ಯಮಿ, ಯುವ ಮುಖಂಡ ಭರತ್ ಬೊಮ್ಮಾಯಿ ಹಾಗೂ ಯುವ ಮುಖಂಡ ಉಮೇಶಗೌಡ ಪಾಟೀಲ ಮಾತನಾಡಿದರು. ಇದೇ ಸಂದರ್ಭದಲ್ಲಿ ಉಚಿತ ದಂತ ತಪಾಸಣಾ ಶಿಬಿರ ಡಾ.ಕಾರ್ತಿಕ ಶಿವಪುರ ನೇತೃತ್ವದಲ್ಲಿ ನಡೆಯಿತು.

ಈ ಸಂದರ್ಭದಲ್ಲಿ ಡಾ. ರಾಜಶೇಖರ ಮ್ಯಾಗೇರಿ, ಮಾಣಿಕಬಾಗ್ ಆಟೋಮೊಬೈಲ್ಸ್ ಪ್ರೈ.ಲಿ ಸಂಸ್ಥೆಯ ಕಾರ್ತಿಕ ಶಿಗ್ಲಿಮಠ, ಸೇಲ್ಸ್ ಮುಖ್ಯಸ್ಥ ಈಶ್ವರ ಕರಮುಡಿ, ರಾಜಣ್ಣ ಶಿಗ್ಲಿಮಠ, ಲಿಂಗರಾಜ ಪಾಟೀಲ, ವಿಜಯಕುಮಾರ ಬಾಳಿಹಳ್ಳಿಮಠ, ಅಶೋಕ ಸಂಕಣ್ಣವರ, ರಮೇಶ ಹತ್ತಿಕಾಳ, ಚಂದ್ರು ಬಾಳಿಹಳ್ಳಿಮಠ, ಶಿವಾನಂದ ಹಿರೇಮಠ, ಉಮೇಶ ಹುಬ್ಬಳ್ಳಿ, ರಾಜು ಕುರಡಗಿ, ಪ್ರಶಾಂತ ನಾಯ್ಕರ, ಶಿವು ಹಿರೇಮನಿ ಪಾಟೀಲ, ರಮೇಶ ಸಜ್ಜಗಾರ, ದೇವೇಂದ್ರಪ್ಪ ಹೂಗಾರ, ಸುರೇಶ ಮರಳಪ್ಪನವರ, ಸಂತೋಷ ಅಕ್ಕಿ, ಸಂಗಮೇಶ ಅಂಗಡಿ, ಬಸವರಾಜ ನರೇಗಲ್, ವಿನಾಯಕ ಹೊರಕೇರಿ, ನವೀನ ಕುರ್ತಕೋಟಿ, ಅವಿನಾಶ್ ಹೊನ್ನಗುಡಿ, ಶಶಿರೇಖಾ ಶಿಗ್ಲಿಮಠ, ನಾಗರತ್ನ ಹುಬ್ಬಿಮಠ, ಜಯಶ್ರೀ ಹುಬ್ಬಳ್ಳಿ, ಶಾರದ ಹಿರೇಮಠ, ವಿಜಯಲಕ್ಷ್ಮೀ ಮಾನ್ವಿ, ಲಲಿತಾ ಬಾಳಿಹಳ್ಳಿಮಠ, ನಿರ್ಮಲಾ ಹುಬ್ಬಿಮಠ ಮುಂತಾದವರು ಉಪಸ್ಥಿತರಿದ್ದರು.

# 10ನೇ ವಾರ್ಷಿಕೋತ್ಸವದ ಅಂಗವಾಗಿ 'ಉಡಾನ್' ಗಾಳಿಪಟ ಹಬ್ಬ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಕೆ.ಹೆಚ್. ಪಾಟೀಲ ವೈದ್ಯಕೀಯ ವಿಜ್ಞಾನ ಸಂಸ್ಥೆ ಸ್ಥಾಪನೆಯಾದ 10ನೇ ವಾರ್ಷಿಕೋತ್ಸವದ ಅಂಗವಾಗಿ ಆಯೋಜಿಸಲಾಗಿದ್ದ 'ಉಡಾನ್ ಗಾಳಿಪಟ ಹಬ್ಬ' ಶುಕ್ರವಾರ ಜರುಗಿತು.

ಈ ಉತ್ಸವದಲ್ಲಿ 84 ತಂಡಗಳು ಭಾಗವಹಿಸಿದದ್ದವು. ಗಾಳಿಪಟ ಹಬ್ಬದ ಪ್ರಮುಖ ಆಕರ್ಷಣೆಗಳಲ್ಲಿ, ದೀರ್ಘ ಕಾಲ ಹಾರಿದ ಗಾಳಿಪಟ, ಅತ್ಯುನ್ನತ ಹಾರಾಟ ಮಾಡಿದ ಗಾಳಿಪಟ ಹಾಗೂ ಅಲಂಕೃತ ಗಾಳಿಪಟ ವಿಭಾಗಗಳಲ್ಲಿ ಸ್ಪರ್ಧೆಗಳನ್ನು ನಡೆಸಿ, ವಿಜೇತರಿಗೆ ಬಹುಮಾನ, ಪದಕಗಳನ್ನು ನೀಡಲಾಯಿತು.



ಇತ್ತೀಚೆಗೆ ನಡೆದ ವಿವಿಧ ಕ್ರೀಡಾ ಸ್ಪರ್ಧೆಗಳ ವಿಜೇತರಿಗೆ ವೇದಿಕೆಯಲ್ಲಿ ಪಾರಿತೋಷಕ ವಿತರಣೆ ಮಾಡಲಾಯಿತು. ಮುಖ್ಯ ಅತಿಥಿಗಳಾಗಿ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಪತಿ ಡಾ. ಸುರೇಶ್ ನಾಡಗೌಡರ ಪಾಲ್ಗೊಂಡಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ ವಹಿಸಿ ಮಾತನಾಡಿ, ಸಂಸ್ಥೆಯ ಶೈಕ್ಷಣಿಕ ಕೋರ್ಸ್‌ಗಳು ಪ್ರಾರಂಭವಾಗಿ 10 ವರ್ಷಗಳು ತುಂಬಿವೆ. 10ನೇ ವಾರ್ಷಿಕೋತ್ಸವದ ಆರಂಭವನ್ನು ಇಂತಹ ಉತ್ಸಾಹಪೂರ್ಣ ಕಾರ್ಯಕ್ರಮದಿಂದ ಆಚರಿಸುತ್ತಿರುವುದು ಸಂತಸದ ವಿಷಯ ಎಂದು ಹೇಳಿದರು.

ಪ್ರಾಂಶುಪಾಲರಾದ ಡಾ. ರಾಜು ಜಿ ಎಂ, ನೋಡಲ್ ಅಧಿಕಾರಿಗಳಾದ ಡಾ. ಈಶ್ವರ ಸಿಂಗ್, ವಿದ್ಯಾರ್ಥಿ ಬಳಗದ ಮಾರ್ಗದರ್ಶಕರಾದ ಡಾ. ಸಮತಾ, ಡಾ. ಕರಿಗೌಡರ, ಡಾ. ಮಹಾಂತೇಶ ಪಾಟೀಲ, ಡಾ. ಭೀಮಸಿಂಗ್, ಡಾ. ಶಿವರೆಡ್ಡಿ ಉಪಸ್ಥಿತರಿದ್ದರು.

## ಸನ್ಮಾರ್ಗ ಮಹಾವಿದ್ಯಾಲಯದಲ್ಲಿ ಮಕ್ಕಳ ರಕ್ಷಣೆ ಕುರಿತು ಜಾಗೃತಿ ಕಾರ್ಯಕ್ರಮ

# ಮಕ್ಕಳ ಮೇಲಿನ ದೌರ್ಜನ್ಯ ತಡೆಯಿರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳ ಭಿಕ್ಷಾಟನೆ, ದೌರ್ಜನ್ಯ ಹಾಗೂ ಬಾಲಕಾರ್ಮಿಕ ಪದ್ಧತಿ ಸೇರಿದಂತೆ ಮಕ್ಕಳ ಮೇಲಿನ ದೌರ್ಜನ್ಯಗಳು ಹಾಗೂ ಅವರ ಹಕ್ಕುಗಳ ಕುರಿತು ಪ್ರತಿಯೊಬ್ಬರೂ ಜಾಗೃತಿ ಹೊಂದುವುದು ಅವಶ್ಯಕವಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮತ್ತು ಮಕ್ಕಳ ಸಹಾಯವಾಣಿಯ ವಿಷಯ ನಿರ್ವಾಹಕರಾದ ಗಿರಿಜಾ ಹಿರೇಮಠ ನುಡಿದರು.



ನಗರದ ಸ್ಟುಡೆಂಟ್ಸ್ ಎಜುಕೇಶನ್ ಸೊಸೈಟಿಯ ಸನ್ಮಾರ್ಗ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಜರುಗಿದ ಮಕ್ಕಳ ರಕ್ಷಣೆ ಕುರಿತ ಜಾಗೃತಿ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಅವರು ಮಾತನಾಡುತ್ತಿದ್ದರು.

ಆಧುನಿಕ ದಿನಗಳಲ್ಲಿ ಮಕ್ಕಳ ಮೇಲೆ ಉಂಟಾಗುತ್ತಿರುವ ವಿವಿಧ ರೀತಿಯ ದೌರ್ಜನ್ಯಗಳನ್ನು ತಡೆಗಟ್ಟುವುದು ಹಾಗೂ ಇದಕ್ಕಾಗಿ ಇರುವ ಕಾನೂನುಗಳ ಕುರಿತು ಅರಿವು ಮೂಡಿಸುವುದು ನಮ್ಮ ಉದ್ದೇಶವಾಗಿದೆ. ವಿಶ್ವಸಂಸ್ಥೆಯು 1989ರಲ್ಲಿ ಅನೇಕ ದೇಶಗಳ ಒಡಂಬಡಿಕೆಯೊಂದಿಗೆ ಮಕ್ಕಳ ಹಕ್ಕುಗಳನ್ನು ಜಾರಿಗೊಳಿಸಿದ್ದು, ಅವುಗಳಲ್ಲಿ ವಿಶೇಷವಾಗಿ ಬದುಕುವ ಹಕ್ಕು, ರಕ್ಷಣೆಯ ಹಕ್ಕು, ವಿಕಾಸ ಹೊಂದುವ ಹಕ್ಕು ಹಾಗೂ ಭಾಗವಹಿಸುವ ಹಕ್ಕುಗಳು ಪ್ರಮುಖವಾಗಿವೆ. ವಿದ್ಯಾರ್ಥಿಗಳು ಇಂಥ ಹಕ್ಕುಗಳಿಂದ ವಂಚಿತರಾಗಿದ್ದರೆ 1098/112ಗೆ ಕರೆ ಮಾಡಿ ಪರಿಹಾರ ಪಡೆಯಬೇಕೆಂದು ಮನವಿ ಮಾಡಿದರು.

ಆಪ್ತ ಸಮಾಲೋಚಕರಾದ ಕಲಾವತಿ ಹಡಪದ ಮಾತನಾಡಿ, ಮಕ್ಕಳ ಉನ್ನತೀಕರಣಕ್ಕಾಗಿ ವಿವಿಧ ಸಂಘ-ಸಂಸ್ಥೆಗಳು ವಿಶೇಷ ಸೇವೆ ಸಲ್ಲಿಸುತ್ತಿದ್ದು, ಮಕ್ಕಳ ನ್ಯಾಯ ಮಂಡಳಿ, ಮಕ್ಕಳ ಕಲ್ಯಾಣ ಸಮಿತಿ, ಮಕ್ಕಳ ವಿಶೇಷ ಪೊಲೀಸ್ ಘಟಕ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ಸಹಾಯವಾಣಿ 1098/112 ಇವುಗಳು ಮಕ್ಕಳ ಮೇಲಿನ ದೌರ್ಜನ್ಯ ತಡೆಗಟ್ಟಲು ಕಟಿಬದ್ಧವಾಗಿವೆ. ಮಕ್ಕಳನ್ನು ಯಾವುದೇ ರೀತಿ ದೌರ್ಜನ್ಯಕ್ಕೆ ಒಳಪಡಿಸಿದರೆ ಜೀವಾವಧಿ ಶಿಕ್ಷೆಯಂಥ ಕಠಿಣ ಕಾನೂನುಗಳು ಜಾರಿಯಲ್ಲಿದ್ದು, ಇಂಥ ಅಪರಾಧ ಪ್ರಕರಣಗಳನ್ನು ಉದಾಹರಿಸಿ ಇಂಥ ಘಟನೆಗಳು ಗೌಪ್ಯವಾಗಿದ್ದರೂ ಅವುಗಳನ್ನು ಬೆಳಕಿಗೆ ತರುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದರು.

ವೇದಿಕೆಯ ಮೇಲೆ ಸ್ಟುಡೆಂಟ್ ಎಜುಕೇಶನ್ ಸೊಸೈಟಿ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ, ಸದಸ್ಯರಾದ ಪ್ರೊ. ರೋಹಿತ್ ಒಡೆಯರ, ಪ್ರೊ. ರಾಹುಲ್ ಒಡೆಯರ, ಪ್ರೊ. ಪುನೀತ್ ದೇಶಪಾಂಡೆ, ಪ್ರೊ. ಸೈಯದ್ ಮತೀನ್ ಮುಲ್ಲಾ, ಆಡಳಿತಾಧಿಕಾರಿಗಳಾದ ಮೃತ್ಯುಂಜಯ ಹಿರೇಮಠ ಉಪಸ್ಥಿತರಿದ್ದರು. ಕಾಮರ್ಸ್ ವಿಭಾಗದ ಹಿರಿಯ ಉಪನ್ಯಾಸಕ ಪ್ರೊ. ಶಿವಕುಮಾರ ವಜ್ರಬಂಡಿ ಸ್ವಾಗತಿಸಿದರು. ಪ್ರೊ. ಪರಶುರಾಮ ಕೊಟ್ನೆಕಲ್ ನಿರೂಪಿಸಿ ವಂದಿಸಿದರು. ವಿಜ್ಞಾನ ಹಾಗೂ ವಾಣಿಜ್ಯ ವಿಭಾಗದ ವಿದ್ಯಾರ್ಥಿಗಳು ಹಾಜರಿದ್ದರು.

> ಸನ್ಮಾರ್ಗ ಕಾಲೇಜಿನ ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ ಮಾತನಾಡಿ, ಮಕ್ಕಳ ಹಕ್ಕುಗಳನ್ನು ಗೌರವಿಸಿ ಅವರ ಮೇಲಿನ ದೌರ್ಜನ್ಯಗಳನ್ನು ತಡೆಗಟ್ಟುವುದು ಇಂದಿನ ಅನಿವಾರ್ಯತೆಯಾಗಿದೆ. ಈ ನಿಟ್ಟಿನಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮತ್ತು ಮಕ್ಕಳ ಸಹಾಯವಾಣಿ ಅತ್ಯುತ್ತಮ ಕಾರ್ಯ ನಿರ್ವಹಿಸುತ್ತಿದ್ದು, ಮಕ್ಕಳ ಭವಿಷ್ಯವನ್ನು ಉಜ್ವಲಗೊಳಿಸುವುದು ಕೇವಲ ಸರ್ಕಾರದ ಕಾರ್ಯ ಎಂದು ಭಾವಿಸದೆ ಪ್ರತಿ ನಾಗರಿಕನೂ ಇದನ್ನು ಹೊಣೆ ಎಂದು ಪರಿಗಣಿಸಬೇಕು ಎಂದರು.

# ನಿಧನ


## ಮಾರುತಿರಡ್ಡಿ ಶೇಖರಡ್ಡಿ ಕೊಣ್ಣೂರು



ಗದಗ: ತಾಲೂಕಿನ ಹರ್ಲಾಪೂರ ಗ್ರಾಮದ ನಿವಾಸಿ ನಿವೃತ್ತ ಬಿ ಎಸ್ ಎಫ್ ಯೋಧ ಮಾರುತಿರಡ್ಡಿ ಶೇಖರಡ್ಡಿ ಕೊಣ್ಣೂರು (61) ಇವರು ದಿ. 14-6-2025 ಶನಿವಾರ ಸಂಜೆ 4- 30ಕ್ಕೆ ನಿಧನರಾದರು.

ಮೃತರು ಪತ್ನಿ, ಮಕ್ಕಳು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗ ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆ ದಿ. 15-6-2025 ಮುಂಜಾನೆ 11ಕ್ಕೆ ಹರ್ಲಾಪೂರ ಗ್ರಾಮದಲ್ಲಿ ನೆರವೇರುವುದು.




VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka